EMAIL : dairyadadaari@gmail.com ಸಂಪುಟ: 01 ಸಂಚಿಕೆ: 175

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶುಕ್ರವಾರ: 19-06-2026


## ವಿಧಾನ ಪರಿಷತ್ ಚುನಾವಣೆ; ಕಾಂಗ್ರೆಸ್ ನಿಂದ ಐವರು.ಬಿಜೆಪಿಯಿಂದ ಇಬ್ಬರು ಗೆಲುವು

**ಬೆಂಗಳೂರು,ಜೂ.18:** ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಐವರು, ಬಿಜೆಪಿಯ ಇಬ್ಬರು ಗೆಲುವು ಸಾಧಿಸಿದ್ದು, ಕಾಂಗ್ರೆಸ್ ತನ್ನ ಐದನೇ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುವಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಯಶಸ್ವಿಯಾಗಿದ್ದಾರೆ. ಈ ದಿಗ್ವಿಜಯದ ಮೂಲಕ ಬಿಜೆಪಿ ಮತ್ತು ಜೆಡಿಎಸ್ ಗೆ ಡಿ.ಕೆ.ಶಿ ಸ್ಪಷ್ಟ ಸಂದೇಶ ರವಾನಿಸಿದ್ದಾರೆ.

ಇಡೀ ದೇಶದಲ್ಲಿ ಎದುರಾಳಿ ಪಕ್ಷಗಳನ್ನು ಧೂಳೀಪಟ ಮಾಡುತ್ತಿರುವ ಬಿಜೆಪಿಗೆ ಈ ಸೋಲು ಭಾರೀ ಹಿನ್ನಡೆಯುಂಟು ಮಾಡಿದ್ದು, ಬಿಜೆಪಿ ಹೈಕಮಾಂಡ್ ಗೆ ತೀವ್ರ ಹಿನ್ನಡೆಯುಂಟು ಮಾಡಿದೆ.

ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ಪಿ.ವಿ.ಮೋಹನ್, ತಿಪ್ಪಣ್ಣಪ್ಪ ಕಮಕನೂರು, ಮಾಳವಳ್ಳಿ ಶಿವಣ್ಣ ಹಾಗೂ 5ನೇ ಅಭ್ಯರ್ಥಿಯಾಗಿ ಡಿ.ಕೆ.ಶಿವಕುಮಾರ್ ಅವರ ಆಪ್ತ ವಿನಯ್ ಕಾರ್ತಿಕ್ ಗೆದ್ದಿದ್ದಾರೆ. ಬಿಜೆಪಿಯ ರಘುಕೌಟಿಲ್ಯ ಗೆದ್ದಿದ್ದು, ಲಿಂಗರಾಜ್ ಪಾಟೀಲ್ ಗೆ ಪ್ರಯಾಸದ ಗೆಲುವು ಪ್ರಾಪ್ತವಾಗಿದೆ. ಜೆಡಿಎಸ್ ನ ಗೋವಿಂದರಾಜ್ ಹೀನಾಯವಾಗಿ ಪರಾಭವಗೊಂಡಿದ್ದಾರೆ. ವಿನಯ್ ಕಾರ್ತಿಕ್ ಅತ್ಯಧಿಕ 32 ಮತಗಳನ್ನು ಪಡೆದು ಅಚ್ಚರಿ ಮೂಡಿಸಿದ್ದಾರೆ.

ಬಿಜೆಪಿ ಮತ್ತು ಜೆಡಿಎಸ್ ನಿಂದಲೂ ಅಡ್ಡ ಮತದಾನವಾಗಿದೆ. ಬಿಜೆಪಿಯಿಂದ 3 ಮತ್ತು ಜೆಡಿಎಸ್ ನಿಂದ 7 ಮತಗಳು ಕಾಂಗ್ರೆಸ್





ನ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್ ಅವರಿಗೆ ದೊರೆತಿದೆ. ವಿನಯ್ ಕಾರ್ತಿಕ ಗರಿಷ್ಠ 28 ಮತಗಳನ್ನು ಪಡೆಯುವ ನಿರೀಕ್ಷೆ ಹೊಂದಿದ್ದರು. ಆದರೆ ನಿರೀಕ್ಷೆಗೂ ಮೀರಿ ಗೆಲುವು ಸಾಧಿಸಿದ್ದಾರೆ. ಬಿಜೆಪಿಯ ಒಂದು ಮತ ಅಸಿಂಧುವಾಗಿದೆ. ಬಿಜೆಪಿಯ ಲಿಂಗರಾಜ್ ಪಾಟೀಲ್ ಕೇವಲ 27 ಮತಗಳನ್ನು ಪಡೆದಿದ್ದು, ಅವರಿಗೆ ಮೂರು ಮತಗಳು ಕಡಿಮೆಯಾಗಿವೆ. ಇದು ಬಿಜೆಪಿಗೆ ನಾಯಕತ್ವಕ್ಕೆ ತೀವ್ರ ಆತಂಕ ಮೂಡಿಸಿದೆ.

ಆಡಳಿತರೂಢ ಕಾಂಗ್ರೆಸ್ ಪಕ್ಷವು ನಿರೀಕ್ಷೆಗೂ ಮೀರಿ ಪ್ರದರ್ಶನ ನೀಡಿದ್ದು, ತನ್ನ ಐದು ಅಭ್ಯರ್ಥಿಗಳನ್ನು ಅಧಿಕೃತವಾಗಿ ಗೆಲ್ಲಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಕೊನೆಯ ಕ್ಷಣದವರೆಗೂ ತೀವ್ರ ಪೈಪೋಟಿಯಿಂದ ಕೂಡಿದ್ದ ಈ ಹೈವೋಲ್ಟೇಜ್ ಕಣದಲ್ಲಿ, ಮೈತ್ರಿಕೂಟದ ಬೆಂಬಲಿತ ಜೆಡಿಎಸ್ ಅಭ್ಯರ್ಥಿ ಗೋವಿಂದರಾಜು ಅವರು ತೀವ್ರ ಮುಖಭಂಗ ಅನುಭವಿಸಿ ಸೋಲೊಪ್ಪಿಕೊಂಡಿದ್ದಾರೆ. ಈ ಫಲಿತಾಂಶವು ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿದೆ.

ಈ ಅಚ್ಚರಿಯ ಫಲಿತಾಂಶಕ್ಕೆ ಪ್ರಮುಖ ಕಾರಣ ವಿರೋಧ ಪಕ್ಷಗಳ ಪಾಳಯದಲ್ಲಿ ನಡೆದಿರುವ ಭಾರೀ ಪ್ರಮಾಣದ ಅಡ್ಡಮತದಾನ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟದ ಹಲವು ಶಾಸಕರು ತಮ್ಮ ಪಕ್ಷದ ಅಧಿಕೃತ ಸೂಚನೆಯನ್ನು ಧಿಕ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಅಡ್ಡಮತದಾನ ಮಾಡಿದ್ದಾರೆ. ಚುನಾವಣಾ ಕಣದಲ್ಲಿ ತಮ್ಮ ಅಭ್ಯರ್ಥಿಯನ್ನು ಸುಲಭವಾಗಿ ಗೆಲ್ಲಿಸಿಕೊಳ್ಳುವ ವಿಶ್ವಾಸದಲ್ಲಿದ್ದ ಉಭಯ ಪಕ್ಷಗಳ ನಾಯಕರಿಗೆ ಈ ಅಡ್ಡಮತದಾನದ ಬೆಳವಣಿಗೆಯು ಅಕ್ಷರಶಃ ನುಂಗಲಾರದ ತುತ್ತಾಗಿ ಪರಿಣಮಿಸಿದೆ. 2ನೇಪುಟಕ್ಕೆ

## ಅಲ್-ಹಿರಾ ಪಬ್ಲಿಕ್ ಶಾಲೆಯಲ್ಲಿ ಕ್ಷಯರೋಗ ತಡೆ ಕುರಿತು ಜಾಗೃತಿ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ:** ನಗರದ ಅಲ್-ಹಿರಾ ಪಬ್ಲಿಕ್ ಶಾಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ಕ್ಷಯರೋಗ (ಟಿ.ಬಿ.) ತಡೆ ಮತ್ತು ನಿಯಂತ್ರಣ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಿಂಧನೂರಿನ ಖ್ಯಾತ ವೈದ್ಯರಾದ ಡಾ. ಅಮ್ಜದ್ ಹಾಗೂ ಮಾನ್ವಿ ಸಾರ್ವಜನಿಕ ಆಸ್ಪತ್ರೆಯ ವೈದ್ಯರಾದ ಡಾ. ನಬಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಕ್ಷಯರೋಗದ ಲಕ್ಷಣಗಳು, ಹರಡುವ ವಿಧಾನ, ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಚಿಕಿತ್ಸೆ ಕುರಿತು ವಿವರವಾದ ಮಾಹಿತಿ ನೀಡಿದರು. ಕ್ಷಯರೋಗವು ಸಂಪೂರ್ಣವಾಗಿ ಗುಣಪಡಿಸಬಹುದಾದ ಕಾಯಿಲೆಯಾಗಿದ್ದು, ಆರಂಭಿಕ ಹಂತದಲ್ಲಿಯೇ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯುವುದು ಅತ್ಯಂತ ಮುಖ್ಯ ಎಂದು ತಿಳಿಸಿದರು.

ವೈದ್ಯರು ವಿದ್ಯಾರ್ಥಿಗಳಿಗೆ ವೈಯಕ್ತಿಕ ಸ್ವಚ್ಛತೆ, ಪೌಷ್ಟಿಕ ಆಹಾರ ಸೇವನೆ, ನಿಯಮಿತ ಆರೋಗ್ಯ ತಪಾಸಣೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮಹತ್ವವನ್ನು ವಿವರಿಸಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಯ ಸಿಬ್ಬಂದಿಗಳು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಆರೋಗ್ಯ ಸಂಬಂಧಿತ ಪ್ರಶ್ನೆಗಳಿಗೆ ಉತ್ತರಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಶಾಲೆಯ ಕಾರ್ಯದರ್ಶಿಗಳಾದ ಶೇಕ್ ಫರೀದ್ ಉಮರಿ ಅವರು ಅತಿಥಿಗಳನ್ನು ಸ್ವಾಗತಿಸಿ, ವಿದ್ಯಾರ್ಥಿಗಳ ಆರೋಗ್ಯ ಮತ್ತು ಶಿಕ್ಷಣ ಎರಡೂ ಸಮಾನವಾಗಿ ಮುಖ್ಯವಾಗಿದ್ದು, ಇಂತಹ ಜಾಗೃತಿ ಕಾರ್ಯಕ್ರಮಗಳು ಮಕ್ಕಳಲ್ಲಿ ಉತ್ತಮ ಆರೋಗ್ಯ ಅಭ್ಯಾಸಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಶಾಲೆಯ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಗೂ ಆಸ್ಪತ್ರೆಯ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.


ಸುದ್ದಿ ಮತ್ತು

ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಅಭಿಮಾನಿ ಬಳಗದಿಂದ ಎನ್.ಎಸ್.ಬೋಸರಾಜು ರವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸವ ವೃತ್ತದಲ್ಲಿ ಎನ್.ಎಸ್.ಬೋಸರಾಜು ಅಭಿಮಾನಿ ಬಳಗದ ವತಿಯಿಂದ ಜಿಲ್ಲೆಯ ವಿಧಾನಪರಿಷತ್ ಸದಸ್ಯರು ಹಾಗೂ ಮಾಜಿ ಸಚಿವರಾದ ಎನ್.ಎಸ್.ಬೋಸರಾಜು ರವರನ್ನು ರಾಜ್ಯದ ಸಚಿವ ಸಂಪುಟದಲ್ಲಿ ಮುಂದುವರೆಸಬೇಕು ಹಾಗೂ ರಾಯಚೂರು ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಬೇಕು ಎಂದು ಸಾವಿರಾರು ಅಭಿಮಾನಿಗಳು ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಒತ್ತಾಯಿಸಿದರು.

ಎನ್.ಎಸ್.ಬೋಸರಾಜು ಅಭಿಮಾನಿ ಬಳಗದ ಸಂಚಲಕರಾದ ಮಾಜಿ ಎ.ಪಿ,ಎಂ.ಸಿ. ಸದಸ್ಯರಾದ ಶಿವರಾಜ ನಾಯಕ ಮಾತನಾಡಿ ಎನ್.ಎಸ್.ಬೋಸರಾಜು ರವರು ಶಾಸಕರಾಗಿ,ಕಲ್ಯಾಣ ಕರ್ನಾಟಕ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ, ವಿಧಾನಪರೀಷತ್ ಸಚಿವರಾಗಿ ತೆಲಾಂಗಣ ಹಾಗೂ ಕೇರಳ ವಿಧಾನಸಭೆ ಚುನಾವಣೆಯಲ್ಲಿ ಪಕ್ಷದ ವರಿಷ್ಠರ ಸೂಚನೆಯಂತೆ ಪಕ್ಷದ ಕಾರ್ಯವನ್ನು ನಿರ್ವಹಿಸಿ ಎರಡು ಕ್ಷೇತ್ರಗಳಲ್ಲಿ ಕಾಂಗ್ರೇಸ್ ಪಕ್ಷದ ಗೇಲುವಿಗೆ ಶ್ರಮಿಸಿದ್ದು ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ್ದಾರೆ. ಹಿಂದುಳಿದ ತಾಲೂಕಿನ ಅಭಿವೃದ್ಧಿಗಾಗಿ ಮುಖ್ಯಮಂತ್ರಿಗಳು ಎನ್.ಎಸ್.ಬೋಸರಾಜು ರವರಿಗೆ ಸಚಿವ ಸ್ಥಾನವನ್ನು ನೀಡಬೇಕು ಹಾಗೂ ರಾಯಚೂರು ಉಸ್ತುವಾರಿಯನ್ನು ನೀಡಬೇಕು ಎಂದು ಒತ್ತಾಯಿಸಿದರು.

ಕಾಂಗ್ರೇಸ್ ಪಕ್ಷದ ಹಿರಿಯ ಮುಖಂಡರಾದ ಬಾಲಸ್ವಾಮಿ ಕೋಡ್ಲಿ ಮಾತನಾಡಿ ರಾಯಚೂರು ಜಿಲ್ಲೆಯಲ್ಲಿ ಬಹುಕೋಟಿ ಅನುದಾನವನ್ನು ತಂದು ಜಿಲ್ಲೆ ಹಾಗೂ ತಾಲೂಕಿನ ಅಭಿವೃದ್ದಿಗೆ ಶ್ರಮಿಸಿದ್ದಾರೆ 2028 ರಲ್ಲಿ ಜಿಲ್ಲೆಯ 8 ತಾಲೂಕುಗಳಲ್ಲಿ ಕಾಂಗ್ರೇಸ್



ಪಕ್ಷದ ಅಭ್ಯರ್ಥಿಗಳ ಗೇಲುವಿಗೆ ಹಾಗೂ ಈ ಭಾಗದ ಸಮಗ್ರವಾದ ಅಭಿವೃದ್ದಿಗಾಗಿ ಎನ್.ಎಸ್.ಬೋಸರಾಜುರವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಶರಣಪ್ಪ ಗುಡದಿನ್ನಿ, ಕುರ್ಡಿ ಚಂದ್ರಶೇಖರ್, ಖಾಲಿದ್ ಗುರು, ಕೆ.ಬಸವಂತಪ್ಪ, ರಾಜಾ ಸುಭಾಷಚಂದ್ರನಾಯಕ,.ತಿಪ್ಪಣ್ಣ ಬಾಗಲವಾಡ, ಅಮ್ಜದ್ ಖಾನ್,ಸುಖಮುನಿ,ಶರಣೆಗೌಡ, ಮಾನ್ವಿ ವಿಧಾನಸಭಾ ಕ್ಷೇತ್ರದ ಸಾವಿರಾರು ಕಾಂಗ್ರೇಸ್ ಪಕ್ಷದ ಮುಖಂಡರು ,ಕಾರ್ಯಕರ್ತರು ಭಾಗವಹಿಸಿದರು.

## ಮೊಹರಂ ಹಬ್ಬವನ್ನು ಶಾಂತಿ, ಸೌಹಾರ್ದದಿಂದ ಆಚರಿಸಿ: ಜಿಲ್ಲಾಧಿಕಾರಿ ಪೂವಿತಾ

ಧೈರ್ಯದ ದಾರಿ

**ರಾಯಚೂರು ಜೂನ್ 18:** ಭಾವೈಕ್ಯದ ಪ್ರತೀಕವಾದ ಮೊಹರಂ ಹಬ್ಬವನ್ನು ಜಿಲ್ಲೆಯ ಎಲ್ಲರೂ ಶಾಂತಿ, ಸೌಹಾರ್ದದಿಂದ ಆಚರಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಜೂನ್ 18ರ ಗುರುವಾರ ದಂದು ನಗರದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ನಡೆದ ಮೊಹರಂ ಹಬ್ಬದ ಜಿಲ್ಲಾ ಮಟ್ಟದ ಶಾಂತಿ ಪಾಲನಾ ಸಭೆಯಲ್ಲಿ ವಿಡಿಯೋ ಕಾನ್ಫರೇನ್ಸ್ ಮೂಲಕ ಭಾಗವಹಿಸಿ ಅವರು ಮಾತನಾಡಿದರು.

ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಅಗತ್ಯ ಸಿದ್ದತೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾಡಿಕೊಳ್ಳಬೇಕು. ಅಲ್ಲದೆ ಜಿಲ್ಲೆಯ ಎಲ್ಲಾ ತಹಶಿಲ್ದಾರರು ಹಾಗೂ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಮೊಹರಂ ಆಚರಣೆಯ ಸ್ಥಳಗಳನ್ನು ಪರಿಶೀಲನೆ ಮಾಡಬೇಕು. ಆ ಗ್ರಾಮದ ಮುಖಂಡರೊಂದಿಗೆ ಸಭೆ ನಡೆಸಬೇಕು. ಅಗ್ನಿ ಅವಘಡಗಳು ನಡೆಯದಂತೆ ಮುಂಜಾಗ್ರತವಾಗಿ ಮೊಹರಂ ಆಚರಣೆಯ ಪ್ರಮುಖ ಸ್ಥಳಗಳಲ್ಲಿ ಆಗ್ನಿ ನಂದಿಸುವ ಸಾಮಾಗ್ರಿಗಳನ್ನು ಇಡಬೇಕು. ಜಿಲ್ಲೆಯಲ್ಲಿ ಯಾವುದೇ ದುರ್ಘಟನೆಗೆ ಅವಕಾಶ ನೀಡದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಶ್ರಮಿಸಬೇಕು. ಜೆಸ್ಕಾಂ ಇಲಾಖೆಯಿಂದ ಹಬ್ಬದ ದಿನಗಳಂದು ಕರೆಂಟ್ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಆಗ್ನಿ ಶಾಮಕದಳದ ಇಲಾಖೆಯ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಮಾಡಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರು ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ 725 ಒಟ್ಟು ಸ್ಥಳಗಳಲ್ಲಿ ಮೊಹರಂ ದೇವರನ್ನು ಪ್ರತಿಷ್ಠಾಪನೆ ಮಾಡಿ ಸಾರ್ವಜನಿಕವಾಗಿ ಆಚರಿಸುವುದಾಗಿ ತಿಳಿದುಬಂದಿದೆ. ಮೊಹರಂ ಹಬ್ಬದ ಪ್ರಯುಕ್ತ ಜೂನ್ 17ರಿಂದ ಜೂನ್ 26ರವರೆಗೆ ವಿವಿಧ ಕಾರ್ಯಕ್ರಮ ನಡೆಯಲಿವೆ. ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಮುದಗಲ್ ಪಟ್ಟಣದಲ್ಲಿ ಐತಿಹಾಸಿಕ ಪ್ರಸಿದ್ಧ ಮೊಹರಂ ಆಚರಣೆ ಇದ್ದು, ಜೂನ್ 22ರಿಂದ 24ರವರೆಗೆ ಪ್ರತಿದಿವಸ ಸುಮಾರು 25 ರಿಂದ 30 ಸಾವಿರ ಜನರು ಇಲ್ಲಿ ಸೇರುವ ಸಾಧ್ಯತೆ ಇರುತ್ತದೆ. ಅಲ್ಲದೆ ಜೂನ್ 25ರಂದು ಖತಲ್ ರಾತ್ರಿ ದಿನ ಸುಮಾರು 70 ರಿಂದ 80 ಸಾವಿರ ಜನ ಸೇರುವ ನಿರೀಕ್ಷೆ ಇರುತ್ತದೆ. ಜೂನ್ 26ರ ದಫನ್ ಕಾರ್ಯಕ್ರಮದ ಮೆರವಣಿಗೆ ಉತ್ಸವ ಕಾಲಕ್ಕೆ ಸುಮಾರು 1.25 ಲಕ್ಷ ಜನ ಸೇರುವ ಸಾಧ್ಯತೆ ಇರುತ್ತದೆ ಎಂದರು.

ಈ ಹಿಂದೆ ರಾಯಚೂರು ಜಿಲ್ಲೆಯಲ್ಲಿ ವಿವಿಧ ಕಾರಣಗಳಿಗಾಗಿ ಮೊಹರಂ ಆಚರಿಸುವ ಕಾಲಕ್ಕೆ ಗಲಾಟೆ-ಗದ್ದಲಗಳಾದ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ತಾಲೂಕ ಕೇಂದ್ರ ಸಿರವಾರ ಪಟ್ಟಣ ಸೇರಿದಂತೆ ಜಿಲ್ಲೆಯ ಒಟ್ಟು 29 ಗ್ರಾಮಗಳಲ್ಲಿ ಮೊಹರಂ ಹಬ್ಬದ ಆಚರಣೆಯನ್ನು ಜಿಲ್ಲಾ ಪೊಲೀಸ್ ಇಲಾಖೆಯ ಪ್ರಸ್ತಾವನೆಯ ಮೇರೆಗೆ ಜಿಲ್ಲಾಧಿಕಾರಿಗಳು ನಿಷೇಧಿಸಿ ಆದೇಶ ಹೊರಡಿಸಿರುತ್ತಾರೆ ಎಂದರು.

ಮೊಹರಂ ಹಬ್ಬದ ಆಚರಣೆಯು ರಾತ್ರಿ ವೇಳೆಯಲ್ಲಿ ನಡೆಯುತ್ತದೆ. ಈ ವೇಳೆಯಲ್ಲಿ ಯಾವುದೇ ದುರ್ಘಟನೆ ನಡೆಯದಂತೆ ನೋಡಿಕೊಳ್ಳಬೇಕು. ಆಗ್ನಿ ಕುಂಡದ ಎತ್ತರವನ್ನು ಕಡಿಮೆ ಮಾಡಬೇಕು. ಆಗ್ನಿ ಅವಘಡ ಸಂಭವಿಸಿದ ಸಮಯದಲ್ಲಿ ಆ ವ್ಯಕ್ತಿಗೆ ನೀರನ್ನು ಹಾಕಬಾರದು. ಮೊಹರಂ ಹಬ್ಬದಲ್ಲಿ ಯಾರ ಮೇಲೆಯೂ ದೈಹಿಕ ಹಲ್ಲೆ ಮಾಡಬಾರದು. ಮದ್ಯ ಮಾರಾಟ ನಿಷೇಧ ಮಾಡಬೇಕು. ಕಂದಾಯ ಅಧಿಕಾರಿಗಳು, ಪಿಡಿಒಗಳ ಸೇರಿದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕಾಲಕಾಲಕ್ಕೆ ಸ್ಥಳಕ್ಕೆ ಭೇಟಿ ನೀಡಬೇಕು. ಮೊಹರಂ ಹಬ್ಬದ ಕುರಿತು ಸರಿಯಾದ ಮಾಹಿತಿ ಪಡೆಯಬೇಕು. ಅಲ್ಲದೆ ಸಿಸಿಟಿವಿಗಳನ್ನು ಅಳವಡಿಸಬೇಕು. ಮಿನಿ ಫೋಕಸ್ ಲೈಟ್ ವ್ಯವಸ್ಥೆ ಮಾಡಬೇಕು. ಜೊತೆಗೆ ಆಗ್ನಿ ಕುಂಡದ ಸುತ್ತಲೂ ಕಟ್ಟಿಗೆ ಕಂಬಗಳನ್ನು ನೆಡಲು ಅಗತ್ಯ ಕ್ರಮ ವಹಿಸಬೇಕು. ಅಲ್ಲದೆ ಎಲ್ಲಾ ಸಮಿತಿಗಳ ಮುಖಂಡರು ಪೊಲೀಸ್ ಇಲಾಖೆಯ ಮಾರ್ಗಸೂಚಿಗಳನ್ನು ಪಾಲಿಸಬೇಕು ಎಂದರು.

ಸಾರ್ವಜನಿಕರ ಸಲಹೆ: ಜಿಲ್ಲೆಯ ಜಿಲ್ಲಾಡಳಿತ, ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರರು ಕೈಜೋಡಿಸಬೇಕು. ಜಿಲ್ಲೆಯಲ್ಲಿ ಯಾವುದೇ ಅವಘಡ ನಡೆಯದಂತೆ ವಿವಿಧ ಇಲಾಖೆಗಳು ಮುನ್ನಚೇರಿಕೆ ವಹಿಸಬೇಕು ಎಂದು ರಾಯಚೂರಿನ ಶ್ರೀನಿವಾಸ್ ಪತ್ತಂಗಿ ಅವರು ಹೇಳಿದರು.

ಮೊಹರಂ ಹಬ್ಬದ ಆಚರಣೆಯ ಪ್ರಮುಖ ಸ್ಥಳಗಳಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಗ್ನಿ ಶಾಮಕದಳದ ಸಿಬ್ಬಂದಿಗಳು ಹೆಚ್ಚಿನ ಪ್ರಮಾಣದಲ್ಲಿ ನಿಯೋಜನೆ ಮಾಡಬೇಕು. ಸರ್ಕಾರದ ವತಿಯಿಂದ ಮೊಹರಂ ಆಚರಣೆಯ ಸ್ಥಳಗಳಲ್ಲಿ ಒಂದು ಜನರೇಟರ್ ವ್ಯವಸ್ಥೆ ಮಾಡಬೇಕು. ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಬೇಕು. ಜಿಲ್ಲಾ ಪೊಲೀಸ್ ಇಲಾಖೆಯು ಉತ್ತಮವಾಗಿ ಕಾರ್ಯ ನಿರ್ವಹಣೆ ಮಾಡುತ್ತಿದೆ ಎಂದು ರಾಯಚೂರಿನ ಖಾಜಾ ಹುಸೇನ್ ಅವರು ಹೇಳಿದರು.

ಜಿಲ್ಲೆಯಲ್ಲಿ ಹಿಂದೂ, ಮುಸ್ಲಿಮರು ಸಹೋದರರ ರೀತಿಯಲ್ಲಿ ಮೊಹರಂ ಹಬ್ಬವನ್ನು ಪ್ರತಿವರ್ಷವು ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಈ ವರ್ಷವು ಯಾವುದೇ ದುರ್ಘಟನೆಗೆ ಅವಕಾಶ ನೀಡದಂತೆ ಮೊಹರಂ ಹಬ್ಬವನ್ನು ಆಚರಣೆ ಮಾಡಬೇಕು.



ಪೊಲೀಸ್ ಇಲಾಖೆಯ ಮಾರ್ಗಸೂಚಿಗಳನ್ನು ಎಲ್ಲರೂ ಪಾಲಿಸಲಾಗುತ್ತದೆ ಎಂದು ರಸುಲ್ ಸಾಬ್ ಅವರು ಹೇಳಿದರು.

ಎಲ್ಲಾ ಸಮಾಜದವರು ಮೊಹರಂ ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಮಾಡಬೇಕು. ಶಕ್ತಿನಗರದಲ್ಲಿ ಕೂಡ ಪೊಲೀಸ್ ಇಲಾಖೆಯಿಂದ ಶಾಂತಿ ಸಭೆಯನ್ನು ಮಾಡಲಾಗಿದೆ ಎಂದು ಶಕ್ತಿನಗರದ ಸೂಗಪ್ಪ ಅವರು ಹೇಳಿದರು.

ರಾಯಚೂರು ವಿಭಾಗದ ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹರೀಶ್ ಜಿ., ಆಗ್ನಿ ಶಾಮಕದಳ ಅಧಿಕಾರಿ ರವೀಂದ್ರ ಅವರು ಸಭೆಯಲ್ಲಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಡಿವೈಸ್ಪಿ ಪರಮಾನಂದ ಘೋಡಕೆ, ಸಿಪಿಐ ನಿಂಗಯ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ ಹಿಂದೂ ಹಾಗೂ ಮುಸ್ಲಿಂ ಸಮಾಜದ ಮುಖಂಡರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# ವಿಧಾನ ಪರಿಷತ್ ಚುನಾವಣೆ; ಕಾಂಗ್ರೆಸ್ ನಿಂದ ಐವರು.ಬಿಜೆಪಿಯಿಂದ ಇಬ್ಬರು ಗೆಲುವು

ಜೆಡಿಎಸ್ ನ ಗೋವಿಂದ ರಾಜ್ ತಮ್ಮ ಪಕ್ಷದ 19 ಸೇರಿ ಕನಿಷ್ಠ 20 ಮತಗಳು ದೊರೆಯುವ ನಿರೀಕ್ಷೆ ಹೊಂದಿದರು. ಆದರೆ ಗೋವಿಂದರಾಜ್ ಕೇವಲ 14 ಮತಗಳನ್ನು ಪಡೆದಿದ್ದಾರೆ. ಕಾಂಗ್ರೆಸ್ ತಾಂತ್ರಿಕ ಮತ್ತು ವ್ಯೂಹಾತ್ಮಕ ಹೆಜ್ಜೆ ಇಟ್ಟು ಬಿಜೆಪಿ ಮತ್ತು ಜೆಡಿಎಸ್ ಗೆ ತೀವ್ರ ಹಿನ್ನೆಡೆಯುಂಟು ಮಾಡಿದೆ. ಇದು ಎರಡೂ ಪಕ್ಷಗಳಿಗೂ ಕರೆಗಂಟೆಯಾಗಿ ಪರಿಣಮಿಸಿದೆ.

ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸೆಡ್ಡು ಹೊಡೆದಿದ್ದ ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿ ಅವರಿಗೆ ಮುಖಭಂಗವಾಗಿದೆ. ಈ ಮೂಲಕ ರಣತಂತ್ರ ರೂಪಿಸುವ ನಿಟ್ಟಿನಲ್ಲಿ ಎಚ್.ಡಿ.ಕೆಗೆ ತೀವ್ರ ಹಿನ್ನೆಡೆಯಾಗಿದೆ.

ಜೆಡಿಎಸ್ ಅಭ್ಯರ್ಥಿ ಗೋವಿಂದರಾಜು ಅವರ ಪರಾಭವವು ಮೈತ್ರಿಕೂಟದ ಲೆಕ್ಕಾಚಾರಗಳನ್ನು ಸಂಪೂರ್ಣವಾಗಿ ತಲೆಕೆಳಗಾಗಿಸಿದೆ. ಬಿಜೆಪಿ ಜೊತೆಗಿನ ಭದ್ರ ಮೈತ್ರಿಯ ಹೊರತಾಗಿಯೂ, ತಮ್ಮದೇ ಶಾಸಕರನ್ನು ಹಿಡಿದಿಟ್ಟುಕೊಳ್ಳುವಲ್ಲಿ ಉಭಯ ಪಕ್ಷಗಳ ವರಿಷ್ಠರು ವಿಫಲರಾಗಿದ್ದಾರೆ. ಶಾಸಕರ ಅಸಮಾಧಾನ ಹಾಗೂ ಪಕ್ಷದ ಆಂತರಿಕ ಭಿನ್ನಮತವು ಈ ಚುನಾವಣೆಯಲ್ಲಿ ಸ್ಫೋಟಗೊಂಡಿದ್ದು, ಮೈತ್ರಿಕೂಟದ ಒಗ್ಗಟ್ಟಿನ ಕೊರತೆಯನ್ನು ಎತ್ತಿತೋರಿಸಿದೆ. ಗೋವಿಂದರಾಜು ಅವರಿಗೆ ತಮ್ಮವರೇ ಕೈಕೊಟ್ಟ ಹಿನ್ನೆಲೆಯಲ್ಲಿ ಈ ಅನಿರೀಕ್ಷಿತ ಸೋಲು ಎದುರಾಗಿದೆ.

ಬಿಜೆಪಿಯ ರಘು ಕೌಟಿಲ್ಯ ಅವರಿಗೆ ನಿಗದಿಪಡಿಸಿದ್ದ 30 ಮತಗಳಲ್ಲಿ ಒಂದು ಮತ ಅಸಿಂಧುವಾಗಿದ್ದು, ಅವರು 29 ಮತಗಳನ್ನು ಪಡೆದುಕೊಂಡಿದ್ದಾರೆ.

ಬಿಜೆಪಿಯಲ್ಲಿನ ಅಸಮಾಧಾನ, ಜೆಡಿಎಸ್ ನ ಅಪಸ್ವರವನ್ನು ಡಿ.ಕೆ. ಶಿವಕುಮಾರ್ ಸಮರ್ಥವಾಗಿ ಬಳಸಿಕೊಂಡಿದ್ದಾರೆ. ರಾಜಕೀಯವಾಗಿ ಇದು ಕಾಂಗ್ರೆಸ್ ನತ್ತ ಧೃವೀಕರಣದ ಮುನ್ಸೂಚನೆಯಾಗಿದೆ.
ವಿಧಾನಪರಿಷತ್ ಚುನಾವಣೆಯಲ್ಲಿ ಐದನೇ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ವಿನಯ್ ಕಾರ್ತಿಕ್ ಅವರು ಜಯ ಸಾಧಿಸಿದ್ದು, ಇದು ಪ್ರಮುಖ ಬೆಳವಣಿಗೆಯಾಗಿ ಪರಿಣಮಿಸಿದೆ. ವಿನಯ್ ಕಾರ್ತಿಕ್ ಅವರ ಗೆಲುವು ರಾಜಕೀಯ ವಲಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದ್ದು, ಕೊನೆಯ ಹಂತದ ಮತಗಳ ಲೆಕ್ಕಾಚಾರದಲ್ಲಿ ತೀವ್ರ ಕುತೂಹಲ ಮೂಡಿಸಿತ್ತು. ವಿವಿಧ ಪಕ್ಷಗಳ ಶಾಸಕರ ಮೊದಲ ಹಾಗೂ ನಂತರದ ಆದ್ಯತೆಯ ಮತಗಳ ಲೆಕ್ಕಾಚಾರದ ಬಳಿಕ ಅವರು ಗೆಲುವಿನ ಗುರಿ ತಲುಪಿದರು.

ಗೆಲುವಿನ ಬಳಿಕ ಮಾತನಾಡಿದ ವಿನಯ್ ಕಾರ್ತಿಕ್, ತಮ್ಮ ನಿರೀಕ್ಷೆಗಿಂತ ಹೆಚ್ಚು ಮತಗಳನ್ನು ಪಡೆದಿದ್ದೇನೆ. 28 ಮತಗಳು ದೊರೆಯುವ ನಿರೀಕ್ಷೆ ಇತ್ತು. ಆದರೆ ಬಿಜೆಪಿ ಮತ್ತು ಜೆಡಿಎಸ್ ನಿಂದಲೂ ತಮಗೆ ಬೆಂಬಲ ದೊರೆತಿದೆ. ತಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ ಎಲ್ಲಾ ಜನಪ್ರತಿನಿಧಿಗಳಿಗೆ ಹಾಗೂ ಬೆಂಬಲಿಗರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ವಿಧಾನಪರಿಷತ್ ಸದಸ್ಯರಾಗಿ ರಾಜ್ಯದ ಅಭಿವೃದ್ಧಿ, ಜನಪರ ಆಡಳಿತ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುವುದಾಗಿ ಅವರು ತಿಳಿಸಿದರು.

ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ವಿನಯ್ ಕಾರ್ತಿಕ್ ಬೆಂಬಲಿಗರು ಸಂಭ್ರಮಾಚರಣೆ ನಡೆಸಿ, ಪರಸ್ಪರ ಸಿಹಿ ಹಂಚಿ ಶುಭಾಶಯ ಕೋರಿದರು. ರಾಜಕೀಯ ಮುಖಂಡರು ಕೂಡ ವಿನಯ್ ಕಾರ್ತಿಕ್ ಅವರಿಗೆ ಅಭಿನಂದನೆ ಸಲ್ಲಿಸಿ, ಹೊಸ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುವಂತೆ ಹಾರೈಸಿದರು.

ಈ ಚುನಾವಣಾ ಫಲಿತಾಂಶವು ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ವಿಧಾನಪರಿಷತ್‌ನ ಕಾರ್ಯಚಟುವಟಿಕೆಗಳ ಮೇಲೂ ಇದರ ಪರಿಣಾಮ ಬೀರುವ ಸಾಧ್ಯತೆ ಇದೆ.

ತಮಗೆ ಮತಗಳು ಕಡಿಮೆಯಾಗಿರುವ ಬಗ್ಗೆ ಪಕ್ಷದ ವರಿಷ್ಠರು ಈ ಬಗ್ಗೆ ಚರ್ಚೆ ನಡೆಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತಾರೆ. ಅಂತಿಮವಾಗಿ ನಾನು ಗೆಲುವು ಸಾಧಿಸಿದ್ದೇನೆ.
ಲಿಂಗರಾಜ್ ಪಾಟೀಲ್, ಬಿಜೆಪಿ ಅಭ್ಯರ್ಥಿ

ಕರ್ನಾಟಕ ವಿಧಾನ ಸಭೆಯಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ನಡೆದ ಚುನಾವಣೆ ಪಲಿತಾಂಶ (ಮೊದಲ ಪ್ರಾಶಸ್ತ್ಯ ಮತ)

ಕಾಂಗ್ರೆಸ್
1. ಬಿ.ಕೆ. ಹರಿಪ್ರಸಾದ್ 30
2. ಪಿ.ವಿ. ಮೋಹನ್ 29
3. ಬಿ.ಎಸ್. ಶಿವಣ್ಣ– 30
4. ತಿಪ್ಪಣಪ್ಪ ಕಮಕನೂರ– 30
5. ವಿನಯ್ ಕಾರ್ತಿಕ್– 32

ಬಿಜೆಪಿ
1. ರಘು ಕೌಟಿಲ್ಯ– 29
2. ಲಿಂಗರಾಜ ಪಾಟೀಲ್ 27

ಜೆಡಿಎಸ್
1. ಗೋವಿಂದರಾಜು–14

ಜೆಡಿಎಸ್, ಬಿಜೆಪಿ ಎರಡೂ ಪಕ್ಷದ ಶಾಸಕರು ಅಡ್ಡ ಮತದಾನ ಮಾಡಿದ್ದಾರೆ. ಪಾರ್ಟಿ ವಿಥ್ ಡಿಫ್ರೆನ್ಸ್ ಎಂದು ಕರೆಸಿಕೊಳ್ಳುವ ಬಿಜೆಪಿಯಿಂದಲೂ ಕ್ರಾಸ್ ವೋಟಿಂಗ್ ಆಗಿದೆ. ನಮ್ಮ ಪಕ್ಷದ ಸಾಧನೆ ನೋಡಿ ನಮಗೆ ಮತಹಾಕಿದ್ದಾರೆ.
ಬಿ.ಕೆ. ಹರಿಪ್ರಸಾದ್
ಅಧ್ಯಕರು, ಕೆಪಿಸಿಸಿ

# ವಾರ್ಡ್ ನಂ. 27ರಲ್ಲಿ ಆರ್‌ಆರ್‌ಆರ್ ಕೇಂದ್ರ ಆರಂಭ



ಧೈರ್ಯದ ದಾರಿ

**ರಾಯಚೂರು:** ನಗರದ ವಾರ್ಡ್ ಸಂಖ್ಯೆ 27ರಲ್ಲಿ ಸ್ವಚ್ಛ ಸರ್ವೇಕ್ಷಣ ಅಭಿಯಾನದ ಅಂಗವಾಗಿ "ನನ್ನ ಜೀವನ ನನ್ನ ಸ್ವಚ್ಛ ನಗರ" ಉಪಕ್ರಮದಡಿ ಆರ್‌ಆರ್‌ಆರ್ (Reduce, Recycle, Reuse) ಕೇಂದ್ರವನ್ನು ಬುಧವಾರ ಶಾಲಾ ವಿದ್ಯಾರ್ಥಿಗಳಿಂದ ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಧಿಕಾರಿಗಳು, ಪರಿಸರ ಸಂರಕ್ಷಣೆ ಮತ್ತು ತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಅತ್ಯಗತ್ಯವಾಗಿದೆ. ಮನೆಯಲ್ಲಿ ಬಳಕೆಯಾಗದೆ ಉಳಿದಿರುವ ಆದರೆ ಇನ್ನೂ ಉಪಯೋಗಕ್ಕೆ ಬರುವ ವಸ್ತುಗಳನ್ನು ಆರ್‌ಆರ್‌ಆರ್ ಕೇಂದ್ರಕ್ಕೆ ನೀಡುವ ಮೂಲಕ ಮರುಬಳಕೆಯ ಸಂಸ್ಕೃತಿಯನ್ನು ಬೆಳೆಸಬೇಕು ಎಂದು ತಿಳಿಸಿದರು.

ಮಕ್ಕಳಲ್ಲಿ ಬಾಲ್ಯದಿಂದಲೇ ತ್ಯಾಜ್ಯ ವಿಂಗಡಣೆ ಹಾಗೂ ಪರಿಸರ ಕಾಳಜಿಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಈ ಕೇಂದ್ರ ಸ್ಥಾಪಿಸಲಾಗಿದೆ. ಮನೆಗಳಲ್ಲಿ ಬಳಸದೇ ಇರುವ ಬಟ್ಟೆಗಳು, ಪಾದರಕ್ಷೆಗಳು, ಪುಸ್ತಕಗಳು, ಆಟಿಕೆಗಳು ಹಾಗೂ ವಿವಿಧ ಪ್ಲಾಸ್ಟಿಕ್ ವಸ್ತುಗಳನ್ನು ಈ ಕೇಂದ್ರಕ್ಕೆ ತಂದು ನೀಡಬಹುದಾಗಿದೆ. ಅವುಗಳನ್ನು ಅಗತ್ಯವಿರುವವರಿಗೆ ತಲುಪಿಸುವುದರ ಜೊತೆಗೆ ಮರುಬಳಕೆಗೆ ಅವಕಾಶ ಕಲ್ಪಿಸಲಾಗುತ್ತದೆ ಎಂದು ವಿವರಿಸಿದರು.

ಇದೇ ವೇಳೆ, ಒಣ ಮತ್ತು ತೇವ ತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಗ್ರಹಿಸುವ ಅಭ್ಯಾಸವನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಬೇಕು. ಸ್ವಚ್ಛತೆ ಕಾಪಾಡುವಲ್ಲಿ ಮಕ್ಕಳ ಪಾತ್ರವೂ ಮಹತ್ವದ್ದಾಗಿದ್ದು, ಅವರು ಕುಟುಂಬದ ಸದಸ್ಯರಲ್ಲೂ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಲಾಯಿತು.

ಈ ಆರ್‌ಆರ್‌ಆರ್ ಕೇಂದ್ರವು ವಾರ್ಡ್ ಸಂಖ್ಯೆ 27, 28 ಹಾಗೂ 29ರ ನಿವಾಸಿಗಳಿಗೆ ಸೇವೆ ಒದಗಿಸಲಿದ್ದು, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹೋಪಾತ್ರ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಘನತ್ಯಾಜ್ಯ ನಿರ್ವಹಣಾ ತಜ್ಞ ಶಫೀ, ಆರೋಗ್ಯ ನಿರೀಕ್ಷಕ ರವಿಕುಮಾರ್, ಮೇಲ್ವಿಚಾರಕರಾದ ನಿಜಾಮುದ್ದೀನ್, ರಮೇಶ್, ಸೈಯದ್ ಅಕ್ಬರ್ ಹುಸೇನ್, ಸಂತೋಷ್, ಸಮುದಾಯ ಸಂಚಾಲಕರಾದ ಸುನಿತಾ, ಪಿ.ಸಿ. ಸುಜಾತ, ಲಕ್ಷ್ಮೀದೇವಿ, ಪೌರಕಾರ್ಮಿಕರು, ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಾಳೆ ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ

**ರಾಯಚೂರು ಜೂನ್ 18:** ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮದಲ್ಲಿ ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಜೂನ್ 20ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಅವರು ಕೋರಿದ್ದಾರೆ.
ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಮತ್ತು ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಅವರು ಜೂನ್.20ರ ಶನಿವಾರ ದಂದು ರಾಯಚೂರು ಜಿಲ್ಲೆಗೆ ಆಗಮಿಸಿ, ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ.
ಈ ಕಾರ್ಯಾಗಾರದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ), ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕಡ್ಡಾಯವಾಗಿ ನಿಗದಿತ ಸಮಯಕ್ಕೆ ಕಾರ್ಯಾಗಾರದಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

# ಜೂ. 21ಕ್ಕೆ ನೀಟ್ ಪರೀಕ್ಷೆ:ಪರೀಕ್ಷೆ ಸೂಸೂತ್ರವಾಗಿ ನಡೆಸುವಂತೆ ಅಧಿಕಾರಿಗಳಿಗೆ ಡಿ.ಸಿ. ಸೂಚನೆ



**ಕಲಬುರಗಿ,ಜೂ.18:** ಇದೇ ಜೂನ್ 21ಕ್ಕೆ ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ ನೀಟ್ ಮರು ಪರೀಕ್ಷೆ ನಡೆಯಲಿದ್ದು, ಎಲ್ಲಿಯೂ ಲೋಪವಾಗದಂತೆ ಪರೀಕ್ಷೆ ಸುಸೂತ್ರವಾಗಿ ಹಾಗೂ ಕಟ್ಟುನಿಟ್ಟಾಗಿ ನಡೆಸುವಂತೆ ಅಧಿಕಾರಿಗಳಿಗೆ ಡಿ.ಸಿ ಇಕ್ರಮ್ ಶರೀಫ್ ಸೂಚನೆ ನೀಡಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರೀಕ್ಷೆ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಪರೀಕ್ಷಾ ಕೇಂದ್ರದ ಮುಖ್ಯಸ್ಥರೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು ನಗರದಾದ್ಯಂತ ಸುಮಾರು 20 ಕೇಂದ್ರದಲ್ಲಿ ಅಂದು ಪರೀಕ್ಷೆ ನಡೆಯಲಿದ್ದು, ಸುಮಾರು 9 ಸಾವಿರಕ್ಕೂ ಹೆಚ್ಚಿನ ಅಭ್ಯರ್ಥಿಗಳು ಪರೀಕ್ಷೆ ಬರೆಯಲು ಹೆಸರು ನೊಂದಾಯಿಸಿಕೊಂಡಿದ್ದಾರೆ ಎಂದರು.

ಪರೀಕ್ಷೆಗೆ ಮುನ್ನವೆ ನಿಗದಿತ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ, ಅಭ್ಯರ್ಥಿ ಬರೆಯಲು ಅನುಕೂಲವಾಗುವಂತೆ ಆಸನ ವ್ಯವಸ್ಥೆ, ವಿದ್ಯುತ್, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು ಎಂದರು.

ಪರೀಕ್ಷೆ ಹಿನ್ನೆಲೆಯಲ್ಲಿ ಕೇಂದ್ರದ ಸುತ್ತ 200 ಮೀಟರ್ ಪ್ರದೇಶ ನಿಷೇಧಾಜ್ಞೆ ಇರಲಿದ್ದು, ಎಲ್ಲಿಯೂ ಅಕ್ರಮಕ್ಕೆ ಅವಕಾಶವಿಲ್ಲ. ಪೊಲೀಸ್ ಇಲಾಖೆ ಕೇಂದ್ರಗಳ ಸುತ್ತ ಹೆಚ್ಚಿನ ಭದ್ರತೆ ಒದಗಿಸಬೇಕು. ವಿದ್ಯಾರ್ಥಿಗಳು ಮೋಬೈಲ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣ ಪರೀಕ್ಷಾ ಕೇಂದ್ರಕ್ಕೆ ತರುವಂತಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಎಸ್.ಪಿ ಅಡ್ಡೂರು ಶ್ರೀನಿವಾಸುಲು, ಡಿ.ಸಿ.ಪಿ. ಶಾಲೂ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಪ್ರೋಬೇಷನರ್ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ, ಪರೀಕ್ಷೆಯ ನಗರ ಸಂಯೋಜಕರಾದ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲ ಭೂಪೇಂದ್ರ, ವಿ.ಟಿ.ಯು ಪ್ರಾಧ್ಯಾಪಕ ಶಂಭುಲಿಂಗ ಸೇರಿದಂತೆ ಇತರೆ ಅಧಿಕಾರಿಗಳು ಭಾಗವಹಿಸಿದ್ದರು.

# ಮೂಲಭೂತ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಪ್ರತಿಭಟನೆ



**ಲಕ್ಷ್ಮೇಶ್ವರ,ಜೂ.18:** ಪಟ್ಟಣದ ವಾರ್ಡ್ ನಂ. 3ರಲ್ಲಿ ಉಂಟಾಗಿರುವ ಕುಡಿಯುವ ನೀರು, ಕಾಲುವೆ ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ ಹಾಗೂ ಸಾರ್ವಜನಿಕ ಶೌಚಾಲಯ ಸೇರಿದಂತೆ ವಿವಿಧ ಮೂಲಸೌಕರ್ಯ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಸಾರ್ವಜನಿಕರು ಹಾಗೂ ಸಮಗ್ರ ರೈತ ಹೋರಾಟ ಸಮಿತಿ ಸದಸ್ಯರು ಲಕ್ಷ್ಮೇಶ್ವರ ಪುರಸಭೆ ಮುಂದೆ ಪ್ರತಿಭಟನೆ ಮಾಡಿದರು. ಪ್ರತಿಭಟನೆಯಲ್ಲಿ ಕುಂದಗೋಳ ಅಭಿನವಬಸವಣ್ಣ ಶ್ರೀಗಳು, ದುಮ್ಮವಾಡ ಸರ್ಪಭೂಷಣ ಶ್ರೀಗಳು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಪಟ್ಟಣದ ಕೆಂಚಲಾಪುರ ಓಣಿಯಿಂದ ಎತ್ತು, ಆಕಳು, ಕೊಡಪಾನ, ಚರಗಿ, ಪೊರಕೆ ಹಿಡಿದು ವಾದ್ಯಮೇಳದೊಂದಿಗೆ ಮುಖ್ಯ ಬಜಾರ್ ರಸ್ತೆಯ ಮೂಲಕ ಪುರಸಭೆಯ ವಿರುದ್ಧ ಘೋಷಣೆ ಕೂಗುತ್ತಾ, ಬಿತ್ತಿಪತ್ರ ಹಿಡಿದು ಪುರಸಭೆಯ ಮುಂದೆ ಘೋಷಣೆ ಕೂಗಿದರು. ಈ ವೇಳೆ ಆಕಳುಗಳನ್ನು ಪುರಸಭೆಯ ಕಂಪೌಂಡ ಒಳಗೆ ಬಿಡದಂತೆ ತಡ ಪೊಲೀಸರ ವಿರುದ್ಧ ಹೋರಾಟಗಾರರು ವಾಗ್ವಾದಕ್ಕಿಳಿದರು.

ಬಳಿಕ ಪ್ರತಿಭಟನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಸಮಗ್ರ ರೈತಪರ ಹೋರಾಟ ವೇದಿಕೆ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಪಟ್ಟಣಕ್ಕೆ ತಿಂಗಳಿಗೊಮ್ಮೆ ನೀರು ಬರುತ್ತದೆ. ಪದೇ ಪದೇ ನದಿ ನೀರಿನ ಪೈಪಲೈನ್ ದುರಸ್ಥಿ, ವಿದ್ಯುತ್ ವ್ಯತ್ಯಯ ಕಾರಣ ಹೇಳಲಾಗುತ್ತಿದೆ. ಇದ್ದ ನೂರಾರು ಕೊಳವೆ ಬಾವಿಗಳ ಸ್ಥಿತಿ ಏನಾಗಿದೆ ? ಪಂಪಸೆಟ್ ದುರಸ್ಥಿ ಮಾಡಿಸಬೇಕು, ಅನಿವರ್ಯವಾದಲ್ಲಿ ಟ್ಯಾಂಕರ್ ಮೂಲಕ ನೀರು ಕೊಡಬೇಕು.

ನಿತ್ಯ ಕೂಲಿ ಮಾಡಿಯೇ ಬದುಕುವ ನೂರಾರು ಬಡ ಕುಟುಂಬಗಳು ಕೆಲಸ ಬಿಟ್ಟು ನೀರು ತರಲು ಪರದಾಡುತ್ತಿದ್ದಾರೆ. ವಿಶೇವಾಗಿ ಹಳ್ಳದಕೇರಿ ಪ್ರದೇಶದಲ್ಲಿ ಶೇಕಡಾ 90ರ ರೈತ ಕುಟುಂಬಗಳು ವಾಸವಾಗಿದ್ದು, ಕೃಷಿ ಹಾಗೂ ಜಾನುವಾರುಗಳ ಮೇಲೆಯೇ ಜೀವನ ನಿರ್ವಹಿಸುತ್ತಿವೆ. ಜೋನ್ ಹಳ್ಳದಿಂದ ಲಂಡಿ ಹಳ್ಳದುದ್ದಕ್ಕೂ ದೊಡ್ಡ ಗಿಡಗಂಟೆಗಳು, ಆಪು ಬೆಳೆದು ಕೆಸರು ತುಂಬಿಕೊಂಡಿದೆ. ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ವಿಷಜಂತುಗಳ ಕಾಟ ಹೆಚ್ಚಾಗಿದೆ.

ಈ ಬಗ್ಗೆ ಗಮನ ಹರಿಸಬೇಕು ಎಂದು ಪುರಸಭೆಗೆ ಅನೇಕ ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜವಾಗಿಲ್ಲ. ಆದರೆ ಪ್ರತಿಭಟನೆ ಮಾಡುತ್ತೇವೆ ಎಂದು ಗೊತ್ತಾಗುತ್ತಿದ್ದಂತೆಯೇ ಸ್ವಚ್ಛತೆ, ನೀರು ಸರಬರಾಜು, ಬೆಳಕಿನ ವ್ಯವಸ್ಥೆ ಕಲ್ಪಿಸುವ ತ್ವರಿತ ಕೆಲಸ ಮಾಡಿದರು. ಹೋರಾಟದಿಂದ ಮಾತ್ರ ಅಧಿಕಾರಿಗಳು ಎಚ್ಚೆತ್ತುಕೊಳ್ಳುತ್ತಾರೆ ಎಂಬ ಮನಸ್ಥಿತಿಗೆ ಜನರು ಬರುಂತಾಗಿದೆ.

ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳು ಬರುವವರೆಗೂ ಪ್ರತಿಭಟನೆ ಮುಂದುವರೆಸುತ್ತೇವೆ ಎಂದು ಪಟ್ಟ ಹಿಡಿದು ಕುತಳು . ಸ್ಥಳಲ್ಲಿಯೇ ಪ್ರತಿಭಟನಾ ನಿರತರಿಗೆ ಉಪಹಾರದ ವ್ಯವಸ್ಥೆ ಮಾಡಲಾಯಿತು.

ಸಂಜೆ 4 ಕ್ಕೆ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಆಗಮಿಸುತ್ತಿದ್ದಂತೆಯೇ ಪ್ರತಿಭಟನಾ ನಿರತರು ಘೋಷಣೆ ಕೂಗಿದರು. ಹಳ್ಳಕ್ಕೆ ತುರ್ತಾಗಿ ಕಲ್ವರ್ಟ್ ನಿರ್ಮಾಣ ಮಾಡಬೇಕು ಹಾಗೂ ಬೀದಿ ದೀಪ, ಸಾರ್ವಜನಿಕ ನಲ್ಲಿ, ಶೌಚಾಲಯ ಸೌಲಭ್ಯ ಕಲ್ಪಿಸಬೇಕು. ಅಲ್ಲದೇ ಈ ಪ್ರದೇಶದಲ್ಲಿ ನಿರ್ಮಾಣಗೊಂಡ ಬಾಲಕರ ವಸತಿ ನಿಲಯಕ್ಕೆ ಪ್ರತ್ಯೇಕ ಬೋರ್‌ವೆಲ್ ವ್ಯವಸ್ಥೆ ಕಲ್ಪಿಸುವ ಯೋಜನೆ ಇದ್ದರೂ ಅದನ್ನು ಅನುಷ್ಠಾನಗೊಳಿಸದೇ ಸಾರ್ವಜನಿಕ ಸೌಲಭ್ಯವನ್ನು ಬೇರೆಡೆಗೆ ವರ್ಗಾಯಿಸಿರುವುದಾಗಿ ಪ್ರತಿಭಟನಾಕಾರರು ಆರೋಪಿಸಿದರು.

ನಾಗರಾಜ ಚಿಂಚಲಿ ಮಾತನಾಡಿ, ಪಟ್ಟಣದಲ್ಲಿ ಹಲವು ವರ್ಷಗಳಿಂದ ನೀರು, ಸ್ವಚ್ಛತೆ, ಆಶ್ರಯ ನಿವೇಶನ, ರಸ್ತೆ ಸಮಸ್ಯೆ ಉಂಟಾಗಿದೆ. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಪ್ರಾಮಾಣಿಕವಾಗಿ ಗಮನ ಹರಿಸಬೇಕು ಕೇವಲ ಸಾಮಾಜಿಕ ಮಾದ್ಯಮಗಳಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳಲಷ್ಟೇ ಅಲ್ಲ ಎಂದರು.

ಈ ಎಲ್ಲ ಸಮಸ್ಯೆಗಳ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಅಹೋರಾತ್ರಿ ಸತ್ಯಾಗ್ರಹ ನಡೆಸಲಾಗಿದೆ ಎಂದು ಹೋರಾಟ ಸಮಿತಿ ಸದಸ್ಯರು ತಿಳಿಸಿದರು. ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಿ, ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿದ ಪಿಡಿ ಬಸನಗೌಡ ಕೊಟೂರ ಅವರು ನಾಲ್ಕೈದು ದಿನಗಳಲ್ಲಿ ಈ ಪ್ರದೇಶದಲ್ಲಿ ಹೊಸ ಬೋರವೆಲ್ ಕೊರೆಸಲಾಗುವುದು, ಶೌಚಾಲಯ, ಸಾರ್ವಜನಿಕ ನಳ/ನಲ್ಲಿ ನಿರ್ಮಾಣಕ್ಕೆ ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು.

ಪಟ್ಟಣದಲ್ಲಿ ಪ್ರಮುಖ ಮೂಲಭೂತ ಸೌಲಭ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ನಿರ್ಲಕ್ಷ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಟಾಕಪ್ಪ ಸಾತಪುತೆ, ಮಲ್ಲಪ್ಪ ಅಂಕಲಿ, ದುಂಡಪ್ಪ ಕೋಟಗಿ, ಹೊನ್ನಪ್ಪ ವಡ್ಡರ, ಶಂಕರ ಬ್ಯಾಡಗಿ, ಶಿವಣ್ಣ ಕಟಗಿ, ಪ್ರಕಾಶ ಗುತ್ತಲ, ಫಕ್ಕೀರೇಶ ಭಜಂತ್ರಿ, ಮುತ್ತು ಬುರಡಿ, ಮಹಾಂತೇಶ ಉಮಚಗಿ, ಚಂದ್ರು ಮಾಗಡಿ, ಮಲ್ಲಿಕಾರ್ಜುನ ನೀರಾಲೋಟ, ಶಂಕ್ರಪ್ಪ ಬುರಡಿ, ಮಾರುದ್ರಪ್ಪ ಲಕ್ಕುಂಡಿ, ಫಕ್ಕೀರಪ್ಪ ರಾಯರ, ಸೋಮಣ್ಣ ಅಂಬಲಿ, ಹೇಮಣ್ಣ ಬುರಡಿ, ಶಿವಪ್ಪ ಹುಲಕೋಟಿ, ಗಂಗಾಧರ ಬೆಲ್ಲದ, ಮಂಜುನಾಥ ಸಂಶಿ, ನಾಗಪ್ಪ ಮುಳಗುಂದ, ಮಂಜುನಾಥ ಗೊರವರ, ಭರಮಗೌಡ ಹೆಬ್ಬಾಳ, ಗಣೇಶ ನೂಲ್ವಿ, ರಾಜಪ್ಪ ಕಣವಿ, ಅರುಣಾ ಕಣವಿ, ಶಾಂತವ್ವ ಪಗಡಿ, ಗಿರಿಜಮ್ಮ ಕರೆಯತ್ತಿನ, ಶಿವಣ್ಣ ಪಾಣಿಗಟ್ಟಿ, ಗೌರಮ್ಮ ಅಂಗಡಿ, ನೀಲಮ್ಮ ಹಣಗಿ, ಲಲಿತವ್ವ ಭಜಂತ್ರಿ, ವಿಜಕ್ಕ ಭಜಂತ್ರಿ, ಶಂಕ್ರವ್ವ ಭಜಂತ್ರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಿಪಿಐ ಬಿ.ವಿ ನ್ಯಾಮಗೌಡ್ರ ಮತ್ತು ಪಿಎಸ್‌ಐ ನಾಗರಾಜ ಗಡಾದ, ಟಿ.ಕೆ ರಾಠೋಡ ಬಂದೋಬಸ್ತ ಏರ್ಪಡಿಸಿದ್ದರು.

# ಮೋದಿ ನೋಡಲು ಸುಂದರ, ಕೆಲಸದಲ್ಲಿ ಕಠಿಣ: ಟ್ರಂಪ್ ಪ್ರಶಂಸೆ



**ಏವಿಯನ್,ಜೂ.18–** ಭಾರತದ ಪ್ರಧಾನಿ ನರೇಂದ್ರ ಮೋದಿ ನೋಡಲು ಅತ್ಯಂತ ಸುಂದರವಾದ ವ್ಯಕ್ತಿ, ಏಂಜಲ್ ರೀತಿ ಕಾಣುತ್ತಾರೆ. ಒಪ್ಪಂದ ವಿಷಯಕ್ಕೆ ಬಂದರೆ ಅಷ್ಟೇ ಕಠಿಣ ಮತ್ತು ಕಿಲ್ಲರ್ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಸ್ನೇಹಿತನ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಫ್ರಾನ್ಸ್‌ನ ಏವಿಯನ್‌ನಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಡೆದ ದ್ವಿಪಕ್ಷೀಯ ಮಾತುಕತೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹೊಗಳುವ ಡೊನಾಲ್ಡ್ ಟ್ರಂಪ್ ಬಳಸಿದ ಪದಗಳಿವು.

ಫ್ರಾನ್ಸ್‌ನಲ್ಲಿ ನಡೆದ ಜಿ7 ಶೃಂಗಸಭೆಯ ಸಂದರ್ಭದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹೊಗಳಿದ್ದಾರೆ, ವಿಶ್ವ ನಾಯಕರು ಭಾಗವಹಿಸಿದ್ದ ಭೋಜನಕೂಟದಲ್ಲಿ ಮಾತನಾಡುತ್ತಾ ಪ್ರಧಾನಿ ಅವರನ್ನು "ಶಾಂತ, ಕೂಲ್ ಮತ್ತು ಸಂಪೂರ್ಣ ಕೊಲೆಗಾರ" ಎಂದು ಬಣ್ಣಿಸಿದ್ದಾರೆ.

ಲಘು ಹೇಳಿಕೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಸ್ವಂತ ವ್ಯಕ್ತಿತ್ವವನ್ನು ಪ್ರಧಾನಿ ನರೇಂದ್ರ ಮೋದಿ ಅವರ ವ್ಯಕ್ತಿತ್ವದೊಂದಿಗೆ ಹೋಲಿಸುತ್ತಾ, ತಮಗಿಂತ "ಪ್ರಧಾನಿ ನರೇಂದ್ರ ಮೋದಿ ಭಿನ್ನವಾಗಿ, ಶಾಂತ, ಕೂಲ್ ಮತ್ತು ಸಂಪೂರ್ಣ ಕೊಲೆಗಾರ ನಾನು ಅಲ್ಲ. ಅವರನ್ನು ನೋಡಿ" ಎಂದು ಹೇಳಿದ್ದಾರೆ.

ಡೊನಾಲ್ಡ್ ಟ್ರಂಪ್ ಪದೇ ಪದೇ ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಪ್ರೀತಿಯಿಂದ ಮಾತನಾಡಿದ್ದಾರೆ, ಆಗಾಗ್ಗೆ ಅವರ ನಾಯಕತ್ವ ಶೈಲಿ ಮತ್ತು ರಾಜಕೀಯ ದೀರ್ಘಾಯುಷ್ಯ ಹೊಗಳುತ್ತಿದ್ದಾರೆ. ಈ ತಿಂಗಳ ಆರಂಭದಲ್ಲಿ, ಭಾರತದ ಅತ್ಯಂತ ದೀರ್ಘಾವಧಿಯ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನರೇಂದ್ರ ಮೋದಿ ಅವರನ್ನು ಅಭಿನಂದಿಸುತ್ತಲೇ ಈ ಪದ ಬಳಸಿದ್ದಾರೆ.

ಫ್ರಾನ್ಸ್‌ನ ಏವಿಯನ್‌ನಲ್ಲಿ ನಡೆದ ಜಿ-7 ಶೃಂಗಸಭೆಯಲ್ಲಿ ನಡೆದ ಸಂವಾದ, 16 ತಿಂಗಳಿಗೂ ಹೆಚ್ಚು ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಡೊನಾಲ್ಡ್ ಟ್ರಂಪ್ ನಡುವಿನ ಮೊದಲ ಮುಖಾಮುಖಿ ಸಭೆಯಾಗಿತ್ತು. ಈ ವೇಳೆ ಪ್ರಧಾನಿ ಅವರನ್ನು ಹೊಗಳುವ ಬರದಲ್ಲಿ ಕಿಲ್ಲರ್ ಎನ್ನುವ ಶಬ್ದವನ್ನೂ ಬಳಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಶೀಘ್ರದಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಮತ್ತು ಪ್ರಮುಖ ವಲಯಗಳಲ್ಲಿ ಸಹಕಾರ ಹೆಚ್ಚಿಸುವ ಗುರಿ ಹೊಂದಿರುವುದಾಗಿ ತಿಳಿಸಿದ್ದಾರೆ.

# ಭಾರತದ ರಕ್ಷಣಾ ಉತ್ಪಾದನೆ 1.78 ಲಕ್ಷ ಕೋಟಿ



**ನವದೆಹಲಿ,ಜೂ.18–**ಭಾರತ ರಕ್ಷಣಾ ವಲಯದಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದೆ. 2025-26ರಲ್ಲಿ, ದೇಶದ ರಕ್ಷಣಾ ಉತ್ಪಾದನೆಯು ದಾಖಲೆಯ ರೂ. 1.78 ಲಕ್ಷ ಕೋಟಿಗಳನ್ನು ತಲುಪಿದೆ, ಇದುವರೆಗಿನ ಅತ್ಯಧಿಕವಾಗಿದೆ.ಇದು ಇತಿಹಾಸದಲ್ಲಿ ರಕ್ಷಣಾ ಸಚಿವಾಲಯದ ಪ್ರಕಾರ, ಈ ಅಂಕಿ ಅಂಶವು ಹಿಂದಿನ ವರ್ಷಕ್ಕಿಂತ 15.6% ಹೆಚ್ಚಾಗಿದೆ, ಆದರೆ 5 ವರ್ಷಗಳಲ್ಲಿ ರಕ್ಷಣಾ ಉತ್ಪಾದನೆಯಲ್ಲಿ 110% ಹೆಚ್ಚಳವಾಗಿದೆ. ಈ ಸಾಧನೆಯನ್ನು 'ಆತ್ಮನಿರ್ಭರ ಭಾರತ' ಮತ್ತು 'ಮೇಕ್ ಇನ್ ಇಂಡಿಯಾ' ಅಭಿಯಾನಗಳ ಪ್ರಮುಖ ಯಶಸ್ಸು ಎಂದು ಪರಿಗಣಿಸಲಾಗುತ್ತಿದೆ.

ಮೂರು ಕ್ಷೇತ್ರಗಳಲ್ಲಿಯೂ ರಕ್ಷಣಾ ಸಾಮರ್ಥ್ಯ ಬಲಗೊಂಡಿದೆ ಎಂದು ಪ್ರಧಾನಿ ಮೋದಿ ಹೇಳಿದರು ಕಳೆದ 12 ವರ್ಷಗಳಲ್ಲಿ, ದೇಶವು ರಕ್ಷಣಾ ಉತ್ಪಾದನೆ ಮತ್ತು ತಾಂತ್ರಿಕ ಅಭಿವೃದ್ಧಿ ಕ್ಷೇತ್ರದಲ್ಲಿ ನಿರಂತರವಾಗಿ ಹೊಸ ಆಯಾಮಗಳನ್ನು ಹೊಂದಿಸಿದೆ. ಭಾರತವು ಮೂರು ಕ್ಷೇತ್ರಗಳಲ್ಲಿ (ವಾಯು, ಭೂಮಿ ಮತ್ತು ಸಮುದ್ರ) ತನ್ನ ರಕ್ಷಣಾ ಸಾಮರ್ಥ್ಯವನ್ನು ಬಲಪಡಿಸಿದೆ.ಭಾರತದ ವಾರ್ಷಿಕ ರಕ್ಷಣಾ ಉತ್ಪಾದನೆಯು ಇದುವರೆಗಿನ ಅತ್ಯಧಿಕವಾಗಿದೆ. 2025-2026ರಲ್ಲಿ ಉತ್ಪಾದನೆಯು 1.78 ಲಕ್ಷ ಕೋಟಿ ರೂ.ಗಳಷ್ಟಿದೆ. ರಕ್ಷಣಾ ಸಚಿವಾಲಯ ಬುಧವಾರ ಈ ಮಾಹಿತಿಯನ್ನು ನೀಡಿದೆ. ಇದು ಹಿಂದಿನ ವರ್ಷಕ್ಕಿಂತ 15.6% ರಷ್ಟು ಬೆಳವಣಿಗೆಯಾಗಿದೆ. 2020-21ರಲ್ಲಿ ರಕ್ಷಣಾ ಉತ್ಪಾದನೆಯು 84,643 ಕೋಟಿ ರೂ.ಗಳಷ್ಟಿತ್ತು.

2013-14ರಲ್ಲಿ ರಕ್ಷಣಾ ಉತ್ಪಾದನೆಯು 43,746 ಕೋಟಿ ರೂ.ಗಳಷ್ಟಿತ್ತು, ಅದು ಈಗ ನಾಲ್ಕು ಪಟ್ಟು ಹೆಚ್ಚಾಗಿದೆ. ಇದರಲ್ಲಿ, 76% ಉತ್ಪಾದನೆಯು ಸಾರ್ವಜನಿಕ ವಲಯದ ಉದ್ಯಮದಿಂದ (ಪಿಎಸ್‌ಯು) ಆಗಿತ್ತು, ಇದರಲ್ಲಿ ಖಾಸಗಿ ವಲಯದ ಕೊಡುಗೆ 24% ಆಗಿತ್ತು. ಇದು 2024-25ರಲ್ಲಿ 22% ಕ್ಕೆ ಏರಿದೆ. ಖಾಸಗಿ ವಲಯದ ಕೊಡುಗೆ ಸಾರ್ವಕಾಲಿಕ ಗರಿಷ್ಠ ಮಟ್ಟದಲ್ಲಿದೆ. 2025-2026ರಲ್ಲಿ ಇದು 42,000 ಕೋಟಿ ರೂ.ಗಳಷ್ಟಿದೆ.2014 ರಲ್ಲಿ ಶೇ. 32 ರಷ್ಟಿದ್ದ ಮದ್ದುಗುಂಡು ಉತ್ಪಾದನಾ ಸಾಮರ್ಥ್ಯವನ್ನು 2026 ರ ವೇಳೆಗೆ ಶೇ. ಕ್ಕೆ ಹೆಚ್ಚಿಸಲಾಗಿದೆ. ಇದು ಆಮದು ಅವಲಂಬನೆಯನ್ನು ಕಡಿಮೆ ಮಾಡಿದೆ ಮತ್ತು ಮಿಲಿಟರಿ ಸನ್ನದ್ಧತೆಯನ್ನು ಬಲಪಡಿಸಿದೆ.ರಕ್ಷಣಾ ಸಚಿವಾಲಯದ ಪ್ರಕಾರ, ಇಂದು ಯುವ ಉದ್ಯಮಿಗಳು ಭಾರತದ ರಕ್ಷಣಾ ನಾವೀನ್ಯತೆಯಲ್ಲಿ ಹೊಸ ದಿಕ್ಕನ್ನು ನಡೆಸುತ್ತಿದ್ದಾರೆ. ದಶಕದ ಹಿಂದೆ ಈ ಕ್ಷೇತ್ರದಲ್ಲಿ ಭಾಗವಹಿಸುವಿಕೆ ಶೂನ್ಯವಾಗಿದ್ದರೆ, ಇಂದು 1,000 ಕ್ಕೂ ಹೆಚ್ಚು ರಕ್ಷಣಾ ನವೋದ್ಯಮಗಳು ಆಧುನಿಕ ತಂತ್ರಜ್ಞಾನದಲ್ಲಿ ಕಾರ್ಯನಿರ್ವಹಿಸುತ್ತಿವೆ.

2013-14ರಲ್ಲಿ ರಕ್ಷಣಾ ಬಜೆಟ್ 2.53 ಲಕ್ಷ ಕೋಟಿ ರೂ.ಗಳಷ್ಟಿತ್ತು. ಈಗ 2026-27ರಲ್ಲಿ ಅದು 7.85 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ. 2025-26ರಲ್ಲಿ ರಕ್ಷಣಾ ರಫ್ತು ದಾಖಲೆಯ 38,424 ಕೋಟಿ ರೂ.ಗಳಿಗೆ ತಲುಪಿದೆ. 2013-14ರಲ್ಲಿ ಇದು 686 ಕೋಟಿ ರೂ.ಗಳಿಗೆ ತಲುಪಿದೆ. ಇದರೊಂದಿಗೆ, ಭಾರತವು ಈಗ 80 ದೇಶಗಳಿಗೆ ರಕ್ಷಣಾ ಉತ್ಪನ್ನಗಳನ್ನು ರಫ್ತು ಮಾಡಲು ಪ್ರಾರಂಭಿಸಿದೆ


# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ 2026 ಸೆಪ್ಟೆಂಬರ್ 17 ಆಚರಣೆ ವಿಷಯ ತಿದ್ದುಪಡಿಗೆ ಅಗ್ರಹ

**ಕಲಬುರಗಿ,ಜೂ.18–**ಹೈದರಾಬಾದ್-ಕರ್ನಾಟಕ ವಿಮೋಚನೆ ದಿನಾಚರಣೆಗೆ ಸಂಬಂಧಿಸಿದಂತೆ 1998 ರಲ್ಲಿ ಹೊರಡಿಸಿದ ಸರ್ಕಾರದ ಆದೇಶವನ್ನು ತಿದ್ದುಪಡಿಗೊಳಿಸಿ, ಪ್ರಸ್ತುತ ತಿದ್ದುಪಡಿ ಮಾಡಿ, ಐತಿಹಾಸಿಕ ಸತ್ಯಾಂಶಗಳ ಆಧಾರದ ಮೇಲೆ "ಕಲ್ಯಾಣ ಕರ್ನಾಟಕ ಉತ್ಸವ" ಆಚರಣೆ ಮಾಡಲೇ ಬೇಕು ಎಂದು ಅನುಚ್ಛೇದ 171(1) ತಿದ್ದುಪಡಿ ಹೋರಾಟ ಸಮಿತಿಯ ವಿಭಾಗೀಯ ಅಧ್ಯಕ್ಷ ಹಾಗೂ ಕರ್ನಾಟಕ ಯುವಜನ ಫೆಡರೇಷನ್ (ಕೆವೈಎಫ್) ರಾಜ್ಯ ಸಂಚಾಲಕ ಹಾಗೂ ನ್ಯಾಯವಾದಿ ಜೆ.ಎಸ್. ವಿನೋದಕುಮಾರ ಅಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶದ ಪ್ರಥಮ ಗೃಹಮಂತ್ರಿ ಹಾಗೂ ಉಪಪ್ರಧಾನಿಯಾಗಿದ್ದ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು 1947 ರಿಂದ 1950 ರವರೆಗೆ ತಮ್ಮ ಅನುಭವ ಮತ್ತು ದೂರದೃಷ್ಟಿಯಿಂದ ವಿವಿಧ ಸಂಸ್ಥಾನಗಳನ್ನು ಭಾರತ ಒಕ್ಕೂಟಕ್ಕೆ ವಿಲೀನಗೊಳಿಸಿದ ಐತಿಹಾಸಿಕ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಿದರು ಎಂದು ಹೇಳಿದ್ದಾರೆ. ಆಗಿನ ಕಾನೂನು ಸಚಿವ ಡಾ.ಬಿ.ಆರ್. ಅಂಬೇಡ್ಕರ್ ಅವರ ಸಲಹೆ ಮತ್ತು ಮಾರ್ಗದರ್ಶನದೊಂದಿಗೆ ಈ ಪ್ರದೇಶ 1 ವರ್ಷ, 1 ತಿಂಗಳು, 3 ದಿವಸ ಸ್ವಾತಂತ್ರ ವಿಲ್ಲದೆ ನರಳಾಡಿತ್ತು , ಆಗ ಪೊಲೀಸ್ ಸೇಕ್ಷನ್ ಎಂಬ 6 ದಿನಗಳ ಕಾರ್ಯಾಚರಣೆ ನಡೆಸಿ ಹಾಗೂ ಸೂಕ್ತ ಪ್ರಕ್ರಿಯೆಗೆ ನೆರವಾಗಿತ್ತು ಎಂದು ತಿಳಿಸಿದ್ದಾರೆ.

ಹೈದರಾಬಾದ್ ಸಂಸ್ಥಾನದ ವಿಲೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಸೆಪ್ಟೆಂಬರ್ 18 ರಂದು ನಿಜಾಮ್ ತಮ್ಮ ಆಡಳಿತ ಮೋಟಾಕುಗೊಳಿಸಲು ಒಪ್ಪಿಗೆ ಸೂಚಿಸಿ ನಿಜಾಮ ರಾಜಾ ಪ್ರಜೆಗಳು ಇನ್ನು ಮುಂದೆ ಭಾರತ ಸರಕಾರಕ್ಕೆ ಒಳಪಟ್ಟಿದ್ದೇವೆ ಎಂದು ಆದೇಶ ಲಿಖಿತ ರೂಪದಲ್ಲಿ ಅಧಿಕಾರ ಹಸ್ತಾಂತರಕ್ಕೆ ಒಪ್ಪಿಗೆ ನೀಡಿದ್ದರು. ಇಂತಹ ಐತಿಹಾಸಿಕ ದಾಖಲೆಗಳನ್ನು ಕಡೆಗಣಿಸಿ, ಸೆಪ್ಟೆಂಬರ್ 17 ರಂದು ಉತ್ಸವ / ವಿಜಯೋತ್ಸವ ಆಚರಿಸುವುದು, ಅಸತ್ಯ ಮತ್ತು ಇತಿಹಾಸದ ಅರ್ಧಸತ್ಯವನ್ನು ಜನರಿಗೆ ಬಿಂಬಿಸುವಂತಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಭಾರತ ಸ್ವಾತಂತ್ರ ನಂತರ ದೇಶದಲ್ಲಿ ಸರ್ಕಾರ, ಸಚಿವ ಸಂಪುಟ ಮತ್ತು ಪ್ರಧಾನಮಂತ್ರಿ ಇದ್ದರೂ ಸಹ, ಇತಿಹಾಸದ ನೈಜ ಸಂಗತಿಗಳನ್ನು ನಿರ್ಲಕ್ಷಿಸಿ



ತಪ್ಪು ಮಾಹಿತಿಯ ಆಧಾರದ ಮೇಲೆ ಆಚರಣೆಗಳನ್ನು ನಡೆಸುತ್ತಿರುವುದು ವಿಷಾದನೀಯ ಸಂಗತಿ ಎಂದು ನ್ಯಾಯವಾದಿ ಜೆನವೇರಿ ವಿನೋದಕುಮಾರ ಅಭಿಪ್ರಾಯಪಟ್ಟಿದ್ದಾರೆ.

ದೇಶ ವಿಭಜನೆಯ ನಂತರ ಉಂಟಾದ ಹಿಂಸಾಚಾರ, ನಿರಾಶ್ರಿತರ ಸಮಸ್ಯೆ, ಬಡತನ, ಅನಕ್ಷರತೆ ಹಾಗೂ ಆಡಳಿತಾತ್ಮಕ ಸವಾಲುಗಳ ನಡುವೆಯೂ ಭಾರತವನ್ನು ಸಂವಿಧಾನಾತ್ಮಕ ಪ್ರಜಾಪ್ರಭುತ್ವದ ದಾರಿಯಲ್ಲಿ ಮುನ್ನಡೆಸಲು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಕೊಡುಗೆ ಈ ಭಾಗಕ್ಕೆ ಅಪಾರವಾಗಿದೆ ಎಂದು ಅವರು ತಿಳಿಸಿದ್ದಾರೆ.

ಇತಿಹಾಸವನ್ನು ತಿರುಚುವ ಮೂಲಕ ಭವಿಷ್ಯವನ್ನು ನಿರ್ಮಿಸಲು ಸಾಧ್ಯವಿಲ್ಲ. ಸುಳ್ಳಿನ ಆಧಾರದ ಉತ್ಸವಗಳು ಕ್ಷಣಿಕವಾಗಿರಬಹುದು. ಆದ್ದರಿಂದ, ನಾವು ಸಲ್ಲಿಸಿದ ಮನವಿಗಳನ್ನು, ರಾಜ್ಯ ಸರ್ಕಾರವು ಕೂಡಾ ಐತಿಹಾಸಿಕ ದಾಖಲೆಗಳನ್ನು ಪರಿಗಣಿಸಿ ಸೂಕ್ತವಾಗಿ ಪರಿಶೀಲಿಸಿ ಹೊಸ ಆದೇಶ ಹೊರಡಿಸಿ ಆಚರಣೆ ಕುರಿತು ಸ್ಪಷ್ಟತೆ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಕಚ್ಚಾ ತೈಲ ದರ ಇಳಿದ ತಕ್ಷಣ ಇಂಧನ ಬೆಲೆ ಇಳಿಯಲ್ಲ

**ತ್ರಿಶೂರ್ (ಕೇರಳ), ಜೂ. 18–** ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಕಡಿಮೆಯಾದ ತಕ್ಷಣವೇ ದೇಶದಲ್ಲಿ ಇಂಧನ ಬೆಲೆಯನ್ನು ಕಡಿತಗೊಳಿಸಲು ಸಾಧ್ಯವಿಲ್ಲ ಎಂದು ಪೆಟ್ರೋಲಿಯಂ ಸಚಿವಾಲಯದ ರಾಜ್ಯ ಖಾತೆ ಸಚಿವ ಸುರೇಶ್ ಗೋಪಿ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಅಗ್ಗದ ಕಚ್ಚಾ ತೈಲವು ಹೊರ್ಮುಜ್ ಜಲಸಂಧಿಯ ಮೂಲಕ ಭಾರತಕ್ಕೆ ರವಾನೆಯಾಗಬೇಕಿದೆ. ಜಲಮಾರ್ಗದಲ್ಲಿ ಹಡಗುಗಳ ಸಂಚಾರ ದಟ್ಟಣೆ ಹೆಚ್ಚಿರುತ್ತದೆ. ಆದ್ದರಿಂದ ಈ ತೈಲ ಭಾರತಕ್ಕೆ ಬರಲು ಸಮಯ ತೆಗೆದುಕೊಳ್ಳುತ್ತದೆ' ಎಂದು ತಿಳಿಸಿದ್ದಾರೆ.

ಈಚೆಗೆ ಇಂಧನ ಬೆಲೆ ಪ್ರತಿ ಲೀಟರ್‌ಗೆ 3.94 ರೂಪಾಯಷ್ಟು ಹೆಚ್ಚಳದಿಂದಾಗಿ ಪರಿಣಾಮ ಬೀರಿದೆ. ಆದರೆ, ಜಾಗತಿಕವಾಗಿ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದೆ ಎಂಬ ಒಂದೇ ಕಾರಣಕ್ಕೆ ದರ ಪರಿಷ್ಕರಣೆ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ತೈಲ ಕಂಪನಿಗಳು ದೊಡ್ಡ ಮಟ್ಟದಲ್ಲಿ ತೊಂದರೆಗೆ ಸಿಲುಕಿದ್ದವು. ತೈಲ ಕಂಪನಿಗಳ ಹೊರೆಯನ್ನು ತಗ್ಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 12 ಸಾವಿರ ಕೋಟಿ ರೂಪಾಯಿಯಷ್ಟು ನಷ್ಟವನ್ನು ಭರಿಸಿದೆ ಎಂದು ಹೇಳಿದ್ದಾರೆ.

ಇಂಧನ ಬೆಲೆ ಹೆಚ್ಚಾಗಿದ್ದಾಗ ಯಾವುದೇ ರಾಜ್ಯ ಸರ್ಕಾರ ಅಬಕಾರಿ ಸುಂಕವನ್ನು ಕಡಿಮೆ ಮಾಡುವ ಮೂಲಕ ತನ್ನ ಆದಾಯವನ್ನು ಬಿಟ್ಟುಕೊಡಲಿಲ್ಲ. ಕೇಂದ್ರ ಸರ್ಕಾರವೂ ನಡೆಯಬೇಕು ಮತ್ತು ತೈಲ ಕಂಪನಿಗಳೂ ಉಳಿಯಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ.

# ಜು.11 ರಂದು ಬೃಹತ್ ರಾಷ್ಟ್ರೀಯ ಲೋಕಅದಾಲತ್

**ಬೀದರ:ಜೂ.18:**ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜುಲೈ 11 ರಂದು ಜಿಲ್ಲೆಯಾದ್ಯಂತ ಬೃಹತ್ ರಾಷ್ಟ್ರೀಯ ಲೋಕಅದಾಲತ ಹಮ್ಮಿಕೊಳ್ಳಲಾಗಿದೆ ಅದೇ ರೀತಿ ಜುಲೈ 18 ರಂದು ಮಧ್ಯಾಹ್ನ 2:30ಕ್ಕೆ ಎನ್ ಐ ಆಕ್ಟ್ ಪ್ರಕರಣಗಳ ಕುರಿತು ಲೋಕಅದಾಲತ್ ಆಯೋಜಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎಸ್. ಬಿ. ರಹಮಾನ ಹೇಳಿದರು.



ಅವರು ಗುರುವಾರ ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಸಭಾಂಗಣ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಈ ಬೃಹತ್ ಲೋಕ ಅದಾಲತನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ ಜೀವನಾಂಶ, ಚೆಕ್ ಬೌನ್ಸ್, ವಿದ್ಯುತ್ ಪ್ರಕರಣಗಳು ಕಂದಾಯ ಅಪರಾಧಿಕ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ಪ್ರಕರಣಗಳು,ಕಾರ್ಮಿಕರ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ ಎಂದರು.

ಈ ಹಿಂದೆ ದಿನಾಂಕ 14.03.2026 ರಂದು ಹಮ್ಮಿಕೊಂಡಿದ್ದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲೆಯಾದ್ಯಾಂತ ಒಟ್ಟು 66,440 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಇದರಲ್ಲಿ 11,869 ನ್ಯಾಯಾಲಯದಲ್ಲಿನ ಪೆಂಡಿಂಗ್ ಪ್ರಕರಣಗಳು, 54571 ವ್ಯಾಜ್ಯಪೂರ್ವ ಪ್ರಕರಣಗಳು ಸೇರಿವೆ. ಈ ಬಾರಿ ಲೋಕಅದಾಲತನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಅತೀ ಹೆಚ್ಚು ಪ್ರಕರಣಗಳನ್ನು ಇತ್ಯಾರ್ಥಗೊಳಿಸಲು ಯೋಜನೆ ರೂಪಿಸಲಾಗಿದ್ದು ಸುಮಾರು ಜಿಲ್ಲೆಯಲ್ಲಿ ಒಟ್ಟು 30,499 ಪ್ರಕರಣಗಳು ಪೆಂಡಿಂಗ್ ಇದ್ದು ಅದರಲ್ಲಿ ಸಂಧಾನಕ್ಕಾಗಿ 1780 ಪ್ರಕರಣಗಳನ್ನು ಗುರುತಿಸಲಾಗಿದ್ದು, ಇನ್ನು ಹೆಚ್ಚು ಪ್ರಕರಣಗಳನ್ನು ರಾಜಿ ಮಾಡುವ ಗುರಿ ಹೊಂದಿದ್ದೇವೆ ಹಾಗೂ ಎಲ್ಲಾ ಪೂರ್ವತಯಾರಿ ಮಾಡಿಕೊಂಡಿದ್ದೇವೆ ಎಂದರು.

ಲೋಕಅದಾಲತ್ ನಲ್ಲಿ ಪ್ರಕರಣಳಲ್ಲಿ ರಾಜಿ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಲಯ ಶುಲ್ಕ ವಾಪಸ್ ಸಿಗಲಿದೆ ಮೇಲ್ಮನವಿ ಮಾಡಲು ಅವಕಾಶ ಇರುವುದಿಲ್ಲ ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ ಹಾಗೆ ಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತವೆ. ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ದಾಖಲಾದ ಪ್ರಕರಣಗಳಿಗೆ ದಂಡದ ಮೊತ್ತದ ಮೇಲೆ 50% ವಿನಾಯಿತಿ ನೀಡಲಾಗಿದೆ ಸಾರ್ವಜನಿಕರಲ್ಲಿ ಮನವಿ ತಾವು ದಿನಾಂಕ 26.06.2026 ರಿಂದ 10.07.2026 ರ ಒಳಗಡೆ ಈ ಸೌಲಭ್ಯವನ್ನು ಪಡೆಯಲು ಕಾಲಾವಕಾಶ ನೀಡಲಾಗಿದೆ ಎಂದು ಅವರು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ರಾಘವೇಂದ್ರ ಉಪಾಧ್ಯೆ ಮಾತನಾಡಿ, "ನ್ಯಾಯಾಲಯಗಳಲ್ಲಿ ಸುದೀರ್ಘ ಕಾಲದಿಂದ ಬಾಕಿ ಉಳಿದಿರುವ ಮತ್ತು ರಾಜೀ ಮಾಡಿಕೊಳ್ಳಬಹುದಾದ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ರಾಷ್ಟ್ರೀಯ ಲೋಕ ಅದಾಲತ್ ಒಂದು ಅತ್ಯುತ್ತಮ ಅವಕಾಶವಾಗಿದೆ. ಇಲ್ಲಿ ಕೇವಲ ಪ್ರಕರಣಗಳು ಇತ್ಯರ್ಥವಾಗುವುದಿಲ್ಲ, ಬದಲಿಗೆ ಉಭಯ ಪಕ್ಷಗಾರರ ನಡುವಿನ ಬಾಂಧವ್ಯವೂ ಗಟ್ಟಿಯಾಗುತ್ತದೆ. ಈ ಪ್ರಕ್ರಿಯೆಯಲ್ಲಿ ಸಮಯ ಮತ್ತು ಹಣದ ಉಳಿತಾಯವಾಗುವುದಲ್ಲದೆ, ಇಲ್ಲಿ ನೀಡಲಾಗುವ ತೀರ್ಪಿಗೆ ಸಿವಿಲ್ ನ್ಯಾಯಾಲಯದ ತಿರ್ಪಿಗೆ ಇರುವಷ್ಟೇ ಕಾನೂನು ಮಾನ್ಯತೆ ಇರುತ್ತದೆ ಹಾಗೂ ಇದರ ವಿರುದ್ಧ ಮೇಲ್ಮನವಿಗೆ ಅವಕಾಶವಿರುವುದಿಲ್ಲ. ಸಾರ್ವಜನಿಕರು ಮತ್ತು ವ್ಯಾಜ್ಯನಿರತರು ಯಾವುದೇ ಭಯ ಅಥವಾ ಹಿಂಜರಿಕೆಯಿಲ್ಲದೆ ಈ ಅದಾಲತ್‌ನಲ್ಲಿ ಭಾಗವಹಿಸಿ, ಪರಸ್ಪರ ಒಪ್ಪಿಗೆಯ ಮೂಲಕ ತಮ್ಮ ದಾವೆಗಳನ್ನು ಇತ್ಯರ್ಥಪಡಿಸಿಕೊಂಡು ನೆಮ್ಮದಿಯ ಜೀವನ ನಡೆಸಬೇಕೆಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಎಲ್ಲಾ ಸಿಬ್ಬಂದಿವರ್ಗ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕಾರು ಉರುಳಿ 7ಮಂದಿ ಸಾವು

**ಹಿಮಾಚಲ ಪ್ರದೇಶ,ಜೂ.18–**ಹಿಮಾಚಲ ಪ್ರದೇಶದಲ್ಲಿ ಭೀಕರ ಅಪಘಾತ ಸಂಭವಿಸಿದೆ. ಚಂಬಾದಲ್ಲಿ ಕಾರು ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಅದೇ ಗ್ರಾಮದ ಏಳು ಜನರು ಸಾವನ್ನಪ್ಪಿದ್ದಾರೆ. ಮೃತರಲ್ಲಿ ಮೂವರು ಸಹೋದರರು ಸೇರಿದ್ದಾರೆ. ಘಟನೆಯ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ.ಹಿಮಾಚಲ ಪ್ರದೇಶದ ಚಂಬಾ ಜಿಲ್ಲೆಯ ಪುಖ್ರಿ-ಮಸ್ರುಂದ್ ರಸ್ತೆಯಲ್ಲಿ ಬುಧವಾರ ತಡರಾತ್ರಿ ಬೊಲೆರೊ ನಿಯಂತ್ರಣ ತಪ್ಪಿ ಮಣಿ ಘಿರೋ ಪಾಯಿಂಟ್ ಬಳಿ 500 ಮೀಟರ್ ಉದ್ದದ ಕಂದಕಕ್ಕೆ ಬಿದ್ದು ಏಳು ಜನರು ಸಾವನ್ನಪ್ಪಿದರು. ಅಪಘಾತ ಎಷ್ಟು ಭೀಕರವಾಗಿತ್ತೆಂದರೆ ವಾಹನದ ಚಕ್ರಗಳು ಹಾರಿಹೋಗಿದ್ದವು. ಕಾರಿನಲ್ಲಿ ಏಳು ಜನರಿದ್ದರು ಮತ್ತು ಎಲ್ಲರೂ ಸ್ಥಳದಲ್ಲೇ ಸಾವನ್ನಪ್ಪಿದರು. ವರದಿಗಳ ಪ್ರಕಾರ, ಕಾರಿನಲ್ಲಿದ್ದವರು ಕುತೇಡ್ ಪಂಚಾಯತ್‌ನ ಭಾಗವಾಗಿರುವ ಮಹಲ್ ಗ್ರಾಮದವರು. ಅವರು ಗ್ರಾಮದಲ್ಲಿ ನಡೆದ ಮುಂಡಾನ್ ಸಮಾರಂಭದಲ್ಲಿ ಭಾಗವಹಿಸಿ ಹಿಂತಿರುಗುತ್ತಿದ್ದರು.ಅಪಘಾತದ ಸ್ಥಳದಲ್ಲಿ ಯಾವುದೇ ಅಪಘಾತ ತಡೆಗೋಡೆಗಳು ಇರಲಿಲ್ಲ. ಇದು ಬದುಕುಳಿಯುವ ಕೊನೆಯ ಅವಕಾಶವನ್ನು ಕಸಿದುಕೊಂಡಿತು. ಕಾರು ನಿಯಂತ್ರಣ ತಪ್ಪಿ ನೇರವಾಗಿ ಹಳ್ಳಕ್ಕೆ ಉರುಳಿತು. ಚಂಬಾ ಪೊಲೀಸ್ ಅಧೀಕ್ಷಕರು (ಎಸ್‌ಪಿ) ಮೃತದೇಹಗಳನ್ನು ಹಳ್ಳದಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ತಿಳಿಸಿದ್ದಾರೆ.

## ವಾರದಿಂದ ವಾರ್ಡ್ಗೆ ಕುಡಿಯುವ ನೀರಿಲ್ಲ: ನಗರಸಭೆ ವಿರುದ್ಧ ಸಾರ್ವಜನಿಕರ ಆಕ್ರೋಶ



**ಯಾದಗಿರಿ:ಜೂ.18:** ನಗರದ 30ನೇ ವಾರ್ಡ್ನಲ್ಲಿ ಕಳೆದ ಒಂದು ವಾರದಿಂದ ಸರಿಯಾಗಿ ಕುಡಿಯುವ ನೀರು ಪೂರೈಕೆ ಆಗದೆ ಸಾರ್ವಜನಿಕರು ಪರದಾಡುವಂತಾಗಿದೆ ಎಂದು ಸ್ಥಳೀಯ ಯುವ ಮುಖಂಡ ಉಮೇಶ್ ಗುಳಗಿ ನಗರಸಭೆ ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಬುಧವಾರ ಮಾತನಾಡಿದ ಅವರು, ವಾರ್ಡ್ನಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ ಆರಂಭದಿಂದಲೇ ನಗರಸಭೆ ಪೌರಾಯುಕ್ತರ ಗಮನಕ್ಕೆ ತರಲಾಗಿದೆ. ಆದರೆ ಹಲವು ಬಾರಿ ದೂರವಾಣಿ ಸಂಪರ್ಕಿಸಲು ಪ್ರಯತ್ನಿಸಿದರೂ ಪೌರಾಯುಕ್ತರು ಸಂಪರ್ಕಕ್ಕೆ ಸಿಗುತ್ತಿಲ್ಲ, ಯಾವುದೇ ಸ್ಪಂದನೆ ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಸಾರ್ವಜನಿಕರ ಮೂಲಭೂತ ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುವುದು ಸರಿಯಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ಅಗತ್ಯ ನಗರಕ್ಕೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಭೀಮಾ ನದಿಯ ನೀರು ಸರಬರಾಜು ವ್ಯವಸ್ಥೆಯ ಜಾಕ್ವೆಲ್ ಸಮಸ್ಯೆಯಿಂದ ನಾಲ್ಕು ದಿನಗಳ ಕಾಲ ವಾರ್ಡ್ಗೆ ನೀರು ಪೂರೈಕೆ ಸ್ಥಗಿತಗೊಂಡಿತ್ತು. ಇದರ ಜೊತೆಗೆ ಹೊಸಳ್ಳಿ ಗ್ರಾಮದ ಮಾರ್ಗದಲ್ಲಿ ನಡೆಯುತ್ತಿರುವ ರಸ್ತೆ ಹಾಗೂ ಫುಟ್ಪಾತ್ ಕಾಮಗಾರಿಯಿಂದ ನೀರು ಸರಬರಾಜು ಪೈಪ್ಗಳು ಹಾನಿಗೊಳಗಾಗಿ ಮತ್ತೆ ಎರಡು ದಿನ ನೀರು ಬಾರದ ಪರಿಸ್ಥಿತಿ ಮಾರ್ಣವಾಗಿದೆ ಎಂದು ತಿಳಿಸಿದರು.

ಕುಡಿಯುವ ನೀರಿಗಾಗಿ ಜನರು ದಿನನಿತ್ಯ ಪರದಾಡುವಂತಾಗಿದೆ. ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ನೀರಿನ ವ್ಯವಸ್ಥೆ ಕಲ್ಪಿಸಬೇಕು. ಇಲ್ಲವಾದರೆ ಸಾರ್ವಜನಿಕರೊಂದಿಗೆ ನಗರಸಭೆಗೆ ಮುತ್ತಿಗೆ ಹಾಕಲಾಗುವುದು ಎಂದು ಉಮೇಶ್ ಗುಳಗಿ ಎಚ್ಚರಿಕೆ ನೀಡಿದರು.

# ಹೈನುಗಾರಿಕೆ, ತೋಟಗಾರಿಕೆ, ಸಾವಯವ ಕೃಷಿ ಅಭಿವೃದ್ಧಿಗೆ ಆದ್ಯತೆ: ಸಂಸದ ಜಿ. ಕುಮಾರ ನಾಯಕ

**ನವದೆಹಲಿ: ಜೂ.18:**ಕಲ್ಯಾಣ ಕರ್ನಾಟಕ ಭಾಗದ ರೈತರ ಆರ್ಥಿಕ ಪ್ರಗತಿ, ಹೈನುಗಾರಿಕೆ ಕ್ಷೇತ್ರದ ವಿಸ್ತರಣೆ ಹಾಗೂ ಕೃಷಿ ಆಧಾರಿತ ಉದ್ಯೋಗ ಸೃಷ್ಟಿಗೆ ಸಂಬಂಧಿಸಿದಂತೆ ಸಂಸದರಾದ ಶ್ರೀ ಜಿ. ಕುಮಾರ ನಾಯಕ ಅವರು ರಾಷ್ಟ್ರೀಯ ಡೈರಿ ಅಭಿವೃದ್ಧಿ ಮಂಡಳಿ (NDDB) ಅಧ್ಯಕ್ಷರಾದ ಡಾ. ಮೀನೇಶ್ ಶಾ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದರು.



ವಿಶೇಷವಾಗಿ ಮಹತ್ವಾಕಾಂಕ್ಷಿ ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೈನುಗಾರಿಕೆ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವುದು, ಹಾಲು ಉತ್ಪಾದಕರಿಗೆ ಆಧುನಿಕ ತಂತ್ರಜ್ಞಾನ, ತರಬೇತಿ ಹಾಗೂ ಅಗತ್ಯ ಮೂಲಸೌಕರ್ಯ ಒದಗಿಸುವ ಕುರಿತು ಚರ್ಚಿಸಲಾಯಿತು.

ಹಾಲು ಸಂಗ್ರಹಣೆ ಮತ್ತು ಸಂಸ್ಕರಣಾ ಘಟಕಗಳ ವಿಸ್ತರಣೆ, ಮೌಲ್ಯವರ್ಧಿತ ಹೈನುಗಾರಿಕೆ ಉತ್ಪನ್ನಗಳ ಉತ್ಪಾದನೆಗೆ ಉತ್ತೇಜನ ನೀಡುವ ಮೂಲಕ ರೈತರ ಆದಾಯ ಹೆಚ್ಚಿಸುವ ಅಗತ್ಯವನ್ನು ಸಂಸದರು ಒತ್ತಿಹೇಳಿದರು.

ಚರ್ಚೆಯ ವೇಳೆ ಡಾ. ಮೀನೇಶ್ ಶಾ ಅವರು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ತೋಟಗಾರಿಕೆ ಹಾಗೂ ಸಾವಯವ ಕೃಷಿಗೆ ಹೆಚ್ಚಿನ ಅವಕಾಶಗಳಿದ್ದು, ಸೂಕ್ತ ಯೋಜನೆಗಳ ಮೂಲಕ ರೈತರಿಗೆ ಹೆಚ್ಚಿನ ಆದಾಯದ ಮಾರ್ಗಗಳನ್ನು ಕಲ್ಪಿಸಬಹುದು ಎಂದು ಅಭಿಪ್ರಾಯಪಟ್ಟರು.

ರೈತ ಉತ್ಪಾದಕ ಸಂಸ್ಥೆಗಳ (FPO) ಬಲವರ್ಧನೆ, ಶೀತ ಸರಪಳಿ ವ್ಯವಸ್ಥೆಗಳ ಅಭಿವೃದ್ಧಿ, ಕೃಷಿ ಉತ್ಪನ್ನಗಳ ಸಂಸ್ಕರಣಾ ಘಟಕಗಳ ಸ್ಥಾಪನೆ ಹಾಗೂ ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವ ಕ್ರಮಗಳ ಬಗ್ಗೆಯೂ ಸಮಾಲೋಚನೆ ನಡೆಯಿತು.

ಸಣ್ಣ ಮತ್ತು ಅತಿಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ನೇರವಾಗಿ ಮಾರುಕಟ್ಟೆಗೆ ತಲುಪಿಸಿ ಉತ್ತಮ ಬೆಲೆ ಪಡೆಯುವಂತೆ ಸಮಗ್ರ ಮಾರುಕಟ್ಟೆ ವ್ಯವಸ್ಥೆ ರೂಪಿಸುವ ಅಗತ್ಯವಿದೆ ಎಂದು ಸಂಸದ ಜಿ. ಕುಮಾರ ನಾಯಕ ತಿಳಿಸಿದರು. ಇದರಿಂದ ಮಧ್ಯವರ್ತಿಗಳ ಅವಲಂಬನೆ ಕಡಿಮೆಯಾಗಿ ರೈತರಿಗೆ ಹೆಚ್ಚಿನ ಲಾಭ ದೊರೆಯಲಿದೆ ಎಂದರು.

ಇದಲ್ಲದೆ, ಮಹಿಳಾ ಸ್ವಸಹಾಯ ಸಂಘಗಳು ಹಾಗೂ ಯುವಕರನ್ನು ಹೈನುಗಾರಿಕೆ ಮತ್ತು ಕೃಷಿ ಆಧಾರಿತ ಉದ್ಯಮಗಳಲ್ಲಿ ತೊಡಗಿಸಿಕೊಳ್ಳಲು ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ರೂಪಿಸುವುದು, ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಬಲಪಡಿಸುವುದು ಹಾಗೂ ಹೊಸ ಉದ್ಯಮಶೀಲತಾ ಅವಕಾಶಗಳನ್ನು ಸೃಷ್ಟಿಸುವ ಕುರಿತು ಚರ್ಚಿಸಲಾಯಿತು.

ಕಲ್ಯಾಣ ಕರ್ನಾಟಕ ಭಾಗದ ರೈತರು, ಹೈನುಗಾರರು ಮತ್ತು ಕೃಷಿ ಆಧಾರಿತ ಉದ್ಯಮಿಗಳಿಗೆ ಹೊಸ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಈ ಭೇಟಿ ಮಹತ್ವದ ಹೆಜ್ಜೆಯಾಗಿದೆ ಎಂದು ಸಂಸದ ಜಿ. ಕುಮಾರ ನಾಯಕ ಹೇಳಿದರು.

# ಬೇಡಿಕೆ ಈಡೇರಿಸದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ



**ಬೀದರ:** ಕರ್ನಾಟಕ ರಾಜ್ಯದಲ್ಲಿ ವಿದ್ಯುಚ್ಛಕ್ತಿ ವಿತರಣಾ ಕ್ಷೇತ್ರವನ್ನು ಖಾಸಗೀಕರಣಗೊಳಿಸದೆ, ಸರ್ಕಾರದ ಅಧೀನದಲ್ಲಿಯೇ ಯಥಾಸ್ಥಿತಿಯಲ್ಲಿ ಮುಂದುವರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬೀದರ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿದ್ದಾರೆ.

ರಾಜ್ಯದ ಎಲ್ಲಾ ವಿದ್ಯುತ್ ವಿತರಣಾ ಕಂಪನಿಗಳು ಈಗಾಗಲೇ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೋದ್ಯಮಿಗಳಿಗೆ ಸಮರ್ಪಕ ಸೇವೆ ಒದಗಿಸುತ್ತಿವೆ ಎಂದು ತಿಳಿಸಲಾಗಿದೆ. ಸರ್ಕಾರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿದ್ಯುತ್ ವಿತರಣಾ ಕಂಪನಿಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಇಂತಹ ಸಂದರ್ಭದಲ್ಲಿ ಖಾಸಗಿ ಕಂಪನಿಗಳಿಗೆ ವಿದ್ಯುತ್ ವಿತರಣಾ ಕ್ಷೇತ್ರದಲ್ಲಿ ಅವಕಾಶ ನೀಡಿದರೆ ಸರ್ಕಾರದ ನೇರ ನಿಯಂತ್ರಣ ಕಡಿಮೆಯಾಗಲಿದ್ದು, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೆಗಳಿಗೆ ಅನ್ಯಾಯವಾಗುವ ಸಾಧ್ಯತೆ ಇದೆ ಎಂದು ಸಂಘ ಆತಂಕ ವ್ಯಕ್ತಪಡಿಸಿದ್ದಾರೆ.

ಟಾಟಾ ಪವರ್ ಕಂಪನಿಯವರು ಸಲ್ಲಿಸಿರುವ ಅರ್ಜಿಯನ್ನು ವಿದ್ಯುಚ್ಛಕ್ತಿ ಕಾಯ್ದೆ-2003ರ ಸೆಕ್ಷನ್ 108ರ ಅನ್ವಯ ತಿರಸ್ಕರಿಸಿ, ರಾಜ್ಯದ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಸರ್ಕಾರದ ಅಧೀನದಲ್ಲಿಯೇ ಮುಂದುವರಿಸುವಂತೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬೇಡಿಕೆಗಳನ್ನು ಸರ್ಕಾರ ಪರಿಗಣಿಸದಿದ್ದಲ್ಲಿ ಜಿಲ್ಲೆಯಾದ್ಯಂತ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದು. ಯಾವುದೇ ಅಹಿತಕರ ಘಟನೆಗಳಿಗೆ ಸರ್ಕಾರವೇ ಹೊಣೆಯಾಗಲಿದೆ ಎಂದು ಸಂಘದ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಗೌರವಾಧ್ಯಕ್ಷ ಸಿದ್ರಾಮಪ್ಪಾ ಆಣದೂರೆ, ಜಿಲ್ಲಾಧ್ಯಕ್ಷ ಶ್ರೀಮಂತ ಬಿರಾದಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ, ರಾಜ್ಯ ಕಾರ್ಯದರ್ಶಿ (ಮಹಿಳಾ ಘಟಕ) ಶೋಭಾವತಿ ಕಾರಭಾರಿ, ರಾಜ್ಯ ಪ್ರತಿನಿಧಿ ಶೇಷರಾವ ಕಣಜಿ, ರಾಜ್ಯ ಉಪಾಧ್ಯಕ್ಷ ಚಂದ್ರಶೇಖರ ಜಮಖಂಡೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಮಹಾನಂದಾ ದೇಶಮುಖ, ಜಿಲ್ಲಾ ಉಪಾಧ್ಯಕ್ಷರಾದ ಶಂಕರೆಪ್ಪಾ ಪಾರಾ ಹಾಗೂ ಸಿದ್ದಣ್ಣಾ ಭೂಶೆಟ್ಟಿ, ಭಾಲ್ಕಿ ತಾಲ್ಲೂಕು ಅಧ್ಯಕ್ಷ ಬಾಬುರಾವ ಜೋಳದಾಬಕಾ, ಕಮಲನಗರ ಅಧ್ಯಕ್ಷ ಪ್ರವೀಣ ಕುಲಕರ್ಣಿ, ಬಸವಕಲ್ಯಾಣ ಅಧ್ಯಕ್ಷ ಸುಭಾಷ ರಗಟೆ, ಬೀದರ ಅಧ್ಯಕ್ಷ ನಾಗಯ್ಯ ಸ್ವಾಮಿ, ಔರಾದ ಅಧ್ಯಕ್ಷ ಪ್ರಕಾಶ ಬಾವಗೆ, ಹುಮನಾಬಾದ ಅಧ್ಯಕ್ಷ ಸತೀಶ ನನ್ನೂರೆ, ಔರಾದ ಮಹಿಳಾ ಘಟಕದ ಅಧ್ಯಕ್ಷೆ ಭಾಗ್ಯಶ್ರೀ ದೇಶಮುಖ, ಭಾಲ್ಕಿ ಮಹಿಳಾ ಘಟಕದ ಅಧ್ಯಕ್ಷೆ ಸುವರ್ಣ ಬಳತೆ ಹಾಗೂ ಭಾಲ್ಕಿ ಮಹಿಳಾ ಘಟಕದ ಕಾರ್ಯಾಧ್ಯಕ್ಷೆ ವನಿತಾ ಮಾಶೆಟ್ಟೆ ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಆಲ್ದಾಳ ಹೊರವಲಯದಲ್ಲಿ ಕೆಎಸ್ಆರ್ಟಿಸಿ ಬಸ್ ಅಪಘಾತ:ಹಲವು ಪ್ರಯಾಣಿಕರಿಗೆ ಗಾಯ

**ಕೆಂಭಾವಿ:ಜೂ.18:** ಪಟ್ಟಣದಿಂದ ತಾಳಿಕೋಟಿಗೆ ತೆರಳುತ್ತಿದ್ದ ಕೆಎ-33 ಎಫ್-0394 ಸಂಖ್ಯೆಯ ಬಸ್ ಆಲ್ದಾಳ ಗ್ರಾಮ ಹೊರವಲಯದಲ್ಲಿ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬಿಟ್ಟು ಪಕ್ಕದ ಜಮೀನಿಗೆ ಇಳಿದ ಪರಿಣಾಮ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸುಮಾರು 90ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡ ಘಟನೆ ಬುಧವಾರ ಬೆಳಿಗ್ಗೆ ಸಂಭವಿಸಿದೆ.



ಬೆಳಿಗ್ಗೆ ಸುಮಾರು 8.30ರ ವೇಳೆಗೆ ಈ ಅಪಘಾತ ಸಂಭವಿಸಿದ್ದು, ಬಸ್ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಮಹಿಳೆಯರು ಹಾಗೂ ಇತರೆ ಪ್ರಯಾಣಿಕರು ಪ್ರಯಾಣಿಸುತ್ತಿದ್ದರು. ಅಪಘಾತದ ತೀವ್ರತೆಗೆ ಹಲವರು ಗಾಯಗೊಂಡಿದ್ದು, ಕೆಲ ವಿದ್ಯಾರ್ಥಿಗಳಿಗೆ ಗಂಭೀರ ಗಾಯಗಳಾಗಿದ್ದರೆ, ಉಳಿದವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಅಪಘಾತದ ಬಳಿಕ ಬಸ್ ಜಮೀನಿನಲ್ಲಿದ್ದ ವಿದ್ಯುತ್ ಕಂಬಕ್ಕೆ ತಾಗಿ ನಿಂತಿದೆ. ಒಂದು ವೇಳೆ ವಿದ್ಯುತ್ ಕಂಬ ಉರುಳಿದ್ದರೆ ಅಥವಾ ವಿದ್ಯುತ್ ತಂತಿಗಳು ಬಸ್ ಮೇಲೆ ಬಿದ್ದಿದ್ದರೆ ಮತ್ತಷ್ಟು ಭಾರೀ ಅನಾಹುತ ಸಂಭವಿಸುವ ಸಾಧ್ಯತೆ ಇತ್ತು ಎಂದು ಸ್ಥಳೀಯರು ತಿಳಿಸಿದ್ದಾರೆ.

ಗಾಯಾಳುಗಳನ್ನು ಕೆಂಭಾವಿ ಸರ್ಕಾರಿ ಹಾಗೂ ಖಾಸಗಿ ಆಂಬುಲೆನ್ಸ್ಗಳ ಮೂಲಕ, ಜೊತೆಗೆ ಸ್ಥಳೀಯರ ಸಹಾಯದಿಂದ ವಿವಿಧ ವಾಹನಗಳಲ್ಲಿ ಕೆಂಭಾವಿ ಸರ್ಕಾರಿ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ನೀಡಲಾಗಿದೆ. ಆಸ್ಪತ್ರೆಗೆ ಗಾಯಾಳುಗಳ ದಂಡೇ ಹರಿದು ಬಂದ ಹಿನ್ನೆಲೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ತುರ್ತು ಚಿಕಿತ್ಸೆ ನೀಡುವಲ್ಲಿ ನಿರತರಾಗಿದ್ದರು.

ಇನ್ನೊಂದೆಡೆ, ಬಸ್ ಚಾಲಕ ಮದ್ಯಪಾನ ಮಾಡಿ ವಾಹನ ಚಲಾಯಿಸುತ್ತಿದ್ದ ಕಾರಣವೇ ಅಪಘಾತ ಸಂಭವಿಸಿದೆ ಎಂದು ಕೆಲವು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಆದರೆ ಈ ಕುರಿತು ಅಧಿಕೃತ ಮಾಹಿತಿ ಇನ್ನೂ ಲಭ್ಯವಾಗಿಲ್ಲ. ಸಂಬಂಧಿತ ಅಧಿಕಾರಿಗಳು ಘಟನೆ ಕುರಿತು ತನಿಖೆ ನಡೆಸುತ್ತಿದ್ದಾರೆ.

ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಸಾರ್ವಜನಿಕರು ಹಾಗೂ ಅಧಿಕಾರಿಗಳು ಭೇಟಿ ನೀಡಿ ಪರಿಸ್ಥಿತಿಯ ಮಾಹಿತಿ ಪಡೆದುಕೊಂಡರು. ಘಟನೆಯಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

# ಕುಡಿಯುವ ನೀರು, ಉಚಿತ ವಿದ್ಯುತ್, ಕಾರ್ಮಿಕರ ವೇತನ ಹೆಚ್ಚಳಕ್ಕೆ ಕಿಸಾನಸಭಾ-ಖೇತ ಮಜದೂರ್ ಯುನಿಯನ್ ಆಗ್ರಹ

**ಆಳಂದ:ಜೂ.18:** ತಾಲೂಕಿನ ಜನರ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವುದು, ರೈತರ ಪಂಪ್ಸೆಟ್ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮುಂದುವರಿಸುವುದು ಹಾಗೂ ಬೆಲೆ ಏರಿಕೆಯಿಂದ ಸಂಕಷ್ಟಕ್ಕೆ ಸಿಲುಕಿರುವ ಎಲ್ಲಾ ವರ್ಗದ ಕಾರ್ಮಿಕರ ವೇತನ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಭಾರತೀಯ ಖೇತ ಮಜದೂರ ಯುನಿಯನ್ ಹಾಗೂ ಅಖಿಲ ಭಾರತ ಕಿಸಾನಸಭಾ ನೇತೃತ್ವದಲ್ಲಿ ಜೂನ್ 25ರಂದು ತಾಲೂಕು ಆಡಳಿತ ಸೌಧ (ತಹಸೀಲ್ದಾರ್ ಕಚೇರಿ) ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕಿಸಾನಸಭಾ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ ತಿಳಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರು ಮತ್ತು ಕಾರ್ಮಿಕರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಈಗಾಗಲೇ 65 ದಿನಗಳ ಕಾಲ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗಿದೆ. ಈ ಅವಧಿಯಲ್ಲಿ ಶಾಸಕರು ಹಾಗೂ ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಹಲವು ಬಾರಿ ಗಮನ ಸೆಳೆಯಲಾಗಿದ್ದರೂ ಸಮಸ್ಯೆಗಳ ಪರಿಹಾರಕ್ಕೆ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳಲಾಗಿಲ್ಲ. ಈ ಹಿನ್ನೆಲೆಯಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ನಿರ್ಧಾರಕ್ಕೆ ಬರಲಾಗಿದೆ ಎಂದು ಹೇಳಿದರು.

ತಾಲೂಕಿನ ಗ್ರಾಮ ಪಂಚಾಯಿತಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ತಲಾ 30 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ ಎಂದು ಹೇಳಲಾಗುತ್ತಿದೆ. ಆದರೆ ಆ ಅನುದಾನದಲ್ಲಿ ಯಾವ ಕಾಮಗಾರಿಗಳು ನಡೆದಿವೆ ಎಂಬುದರ ಸ್ಪಷ್ಟ ಲೆಕ್ಕ ಇಲ್ಲ. ಅಧಿಕಾರಿಗಳು ಕೇವಲ 13 ಗ್ರಾಮಗಳಲ್ಲಿ ಮಾತ್ರ ನೀರಿನ ಸಮಸ್ಯೆ ಇದೆ ಎಂದು ಹೇಳುತ್ತಿದ್ದಾರೆ. ವಾಸ್ತವದಲ್ಲಿ ಬಹುತೇಕ ಎಲ್ಲಾ ಗ್ರಾಮಗಳಲ್ಲೂ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದೆ. ಮಳೆ ಮತ್ತಷ್ಟು ವಿಳಂಬವಾದರೆ ಗ್ರಾಮೀಣ ಪ್ರದೇಶಗಳಲ್ಲಿ ಪರಿಸ್ಥಿತಿ ಭೀಕರ ಸ್ವರೂಪ ಪಡೆಯಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಭೀಮಾ ಹಿನ್ನೀರಿನಿಂದ ಅಮರ್ಜಾ ಅಣೆಕಟ್ಟೆಗೆ ನೀರು ತರುವ ಯೋಜನೆಯು ಅವೈಜ್ಞಾನಿಕವಾಗಿದ್ದು, ಭೀಮಾ ನದಿಯ ಜಾಕ್ವೆಲ್ಗಳೇ ಒಣಗಿರುವ ಸಂದರ್ಭದಲ್ಲಿ ಅಲ್ಲಿಂದ ನೀರು ತರಲು ಸಾಧ್ಯವೇ ಎಂಬ ಪ್ರಶ್ನೆ ಉದ್ಭವಿಸಿದೆ. ಸುಮಾರು 600 ಕೋಟಿ ರೂ. ವೆಚ್ಚದ ಈ ಯೋಜನೆ ನಿರೀಕ್ಷಿತ ಫಲಿತಾಂಶ ನೀಡದೆ ವಿಫಲ ಹಂತ ತಲುಪಿದೆ ಎಂದು ಟೀಕಿಸಿದರು.

ನೀರಿನ ಸಮಸ್ಯೆ ಕುರಿತು ಮಾಜಿ ಶಾಸಕ ಸುಭಾಷ ಗುತ್ತೇದಾರ ಅವರ ಹೇಳಿಕೆಗಳು ವಾಸ್ತವದಿಂದ ದೂರವಾಗಿವೆ. ಅವರ ಹಿಂದಿನ ಆಡಳಿತದಲ್ಲಿ ನೀರಾವರಿ ಕ್ಷೇತ್ರದಲ್ಲಿ ಯಾವುದೇ ಗಮನಾರ್ಹ ಸಾಧನೆ ನಡೆದಿಲ್ಲ ಎಂದು ಆರೋಪಿಸಿದರು.

ಹಾಲಿ ಶಾಸಕ ಬಿ.ಆರ್. ಪಾಟೀಲ ಅವರು ಉತ್ತಮ ವಿಚಾರಗಳನ್ನು ಪ್ರಸ್ತಾಪಿಸುತ್ತಾರೆ. ಅಣ್ಣಾ ಹಜಾರೆ ಅವರ ಮಾದರಿಯ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾತನಾಡುತ್ತಾರೆ. ಆದರೆ ಅವುಗಳ ಅನುಷ್ಠಾನ ಎಲ್ಲಿದೆ ಎಂಬುದನ್ನು ಜನರಿಗೆ ತಿಳಿಸಬೇಕು ಎಂದು ಪ್ರಶ್ನಿಸಿದರು.ಸಿರಪೂರ ಮಾದರಿ ಯೋಜನೆ ಜಾರಿಯ ವಿಚಾರದಲ್ಲೂ ಅನುಮಾನಗಳಿದ್ದು, ಈ ಯೋಜನೆಗೆ ಸಲಹೆ ನೀಡಿದವರು ಯಾರು ಎಂಬುದನ್ನು ಬಹಿರಂಗಪಡಿಸಬೇಕು. ತಜ್ಞರ ಸಮಿತಿಯ ವರದಿಯಂತೆ ಅಂತರ್ಜಲ ಅಭಿವೃದ್ಧಿಗೆ ಮಾರ್ಗಸೂಚಿಗಳು ಸಿದ್ಧವಾಗಿದ್ದು, ಮಳೆನೀರಿನ ಪ್ರತಿಯೊಂದು ಹನಿಯನ್ನೂ ಸಂರಕ್ಷಿಸಿ ಬಳಸುವ ವ್ಯವಸ್ಥೆ ಜಾರಿಯಾಗಬೇಕು. ಶಾಶ್ವತ ನೀರಿನ ನಿರ್ವಹಣಾ ಯೋಜನೆಗಳನ್ನು ಅನುಷ್ಠಾನಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕು ಗಂಭೀರ ಜಲಸಂಕಷ್ಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.ವಿದ್ಯುತ್ ಕ್ಷೇತ್ರದ ಖಾಸಗೀಕರಣವನ್ನು ಸರ್ಕಾರ ಕೈಬಿಡಬೇಕು. ಪಂಪ್ಸೆಟ್ಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಕೆ ಹೆಸರಿನಲ್ಲಿ ರೈತರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಹಾಕುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.ಸುದ್ದಿಗೋಷ್ಠಿಯಲ್ಲಿ ಕಿಸಾನಸಭಾ ತಾಲೂಕು ಅಧ್ಯಕ್ಷ ಧರ್ಮಣ್ಣಾ ಪೂಜಾರಿ, ಗೌರವ ಅಧ್ಯಕ್ಷ ಚಂದ್ರಕಾಂತ ಖೋಬ್ರೆ ಹಾಗೂ ಭಾರತೀಯ ಖೇತ ಮಜದೂರ ಯುನಿಯನ್ ಕಾರ್ಯದರ್ಶಿ ರಮೇಶ್ ಹತ್ತಿಕಾಳೆ ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE